**2012 ರ ಕರ್ನಾಟಕ ಅಧಿನಿಯಮ ಸಂಖ್ಯೆ 10**

**ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2011**

**ಪ್ರಕರಣಗಳ ಪಟ್ಟಿ**


**ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ**

**ಪ್ರಕರಣಗಳು :**

**ಅಧ್ಯಾಯ – I**

**ಪ್ರಾರಂಭಿಕ**

1. ಚಿಕ್ಕ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ
2. ಪರಿಭಾಷೆಗಳು

**ಅಧ್ಯಾಯ – II**

**ಪ್ರಾಧಿಕಾರಗಳು ಮತ್ತು ಅದರ ಉದ್ಯೋಗಿಗಳು**

3. ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ
4. ಪದಾವಧಿ ಮತ್ತು ಸೇವಾ ಷರತ್ತುಗಳು
5. ಸದಸ್ಯನ ಪದಕ್ಕೆ ಅನರ್ಹತೆಗಳು
6. ಸದಸ್ಯನನ್ನು ತೆಗೆದು ಹಾಕುವುದು
7. ಮರು ನೇಮಕಾತಿಗೆ ಅರ್ಹತೆ
8. ಪ್ರಾಧಿಕಾರದ ಅಧಿಕಾರಗಳು
9. ಪ್ರಾಧಿಕಾರದ ಉಪ ಸಮಿತಿಗಳು
10. ಆಯುಕ್ತನ ನೇಮಕಾತಿ
11. ಆಯುಕ್ತನ ಅಧಿಕಾರಗಳು ಮತ್ತು ಕರ್ತವ್ಯಗಳು
12. ಪ್ರಾಧಿಕಾರದ ನೌಕರರು
13. ಪ್ರಾಧಿಕಾರದ ಅಡಿಯಲ್ಲಿನ ಸೇವೆಗಳಿಗಾಗಿ ಸಾಮಾನ್ಯ ಅನರ್ಹತೆಗಳು
14. ಪ್ರಾಧಿಕಾರದ ಸಭೆಗಳು
15. ವ್ಯವಹರಣೆಗಳು ಸರಿಯಾದುದೆಂದು ಮತ್ತು ಊರ್ಜಿತವಾದುದೆಂದು ಪೂರ್ವಭಾವನೆ ಮಾಡುವುದು
16. ಸುತ್ತೋಲೆಯ ಮೂಲಕ ಪ್ರಾಧಿಕಾರದ ತೀರ್ಮಾನಗಳನ್ನು ಸೂಚಿಸುವುದು
17. ಕೆಲವು ತೀರ್ಮಾನಗಳನ್ನು ಕೈಗೊಳ್ಳಲು ಅಧ್ಯಕ್ಷನ ಅಧಿಕಾರ

**ಅಧ್ಯಾಯ – III**

**ಕಿತ್ತೂರಿನ ಅಭಿವೃದ್ಧಿ ಮತ್ತು ನಿರ್ವಹಣೆ**

18. ಕಿತ್ತೂರಿನಲ್ಲಿರುವ ಪರಂಪರೆಯ ತಾಣಗಳು
19. ಅನುಸೂಚಿಯನ್ನು ತಿದ್ದುಪಡಿ ಮಾಡುವ ಅಧಿಕಾರ

20. ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು, ಅದರ ಅನುಮೋದನೆ ಹಾಗೂ ಅದನ್ನು ಕಾರ್ಯಗತಗೊಳಿಸುವುದು

21. ಕಿತ್ತೂರಿನ ನಿರ್ವಹಣೆ

22. ಪ್ರವೇಶಿಸುವ ಅಧಿಕಾರ

23. ಪ್ರಾಧಿಕಾರಕ್ಕೆ ರಾಜ್ಯ ಸರ್ಕಾರದ ಅಧಿಕಾರಗಳ ಪ್ರತ್ಯಾಯೋಜನೆ

24. ಬೀದಿ ಮುಂತಾದುವುಗಳ ನಿರ್ವಹಣೆ ಕರ್ತವ್ಯ

25. ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974ನ್ನು ಪ್ರಾಧಿಕಾರದ ಆವರಣಗಳಿಗೆ ಅನ್ವಯಿಸುವುದು

26. ಪ್ರವಾಸೋದ್ಯಮಕ್ಕೆ ಮತ್ತು ಯಾತ್ರೆ ಕೈಗೊಳ್ಳುವುದಕ್ಕೆ ಪ್ರಾಧಿಕಾರವು ಉತ್ತೇಜಿಸುವುದು

27. ಅಧಿಕಾರಗಳ ಪ್ರತ್ಯಾಯೋಜನೆ

**ಅಧ್ಯಾಯ – IV**
**ಹಣಕಾಸು ಮತ್ತು ಸ್ವತ್ತು**

28. ಪ್ರಾಧಿಕಾರದ ನಿಧಿ

29. ನಿಧಿಯ ಬಳಕೆ

30. ಸರ್ಕಾರದಿಂದ ಅನುದಾನ

31. ಪ್ರಾಧಿಕಾರದ ಆಯವ್ಯಯ

32. ಲೆಕ್ಕ ಪತ್ರಗಳು ಮತ್ತು ಲೆಕ್ಕಪರಿಶೋಧನೆ

33. ವರದಿಗಳು

**ಅಧ್ಯಾಯ – V**
**ಸಂಕೀರ್ಣ**

34. ಪ್ರಾಧಿಕಾರವು ತನ್ನ ಅಧಿಕಾರ ವ್ಯಾಪ್ತಿಯೊಳಗಿನ ಯಾವುದೇ ಜಮೀನನ್ನು ಮಾರಾಟ ಮಾಡಕೂಡದು

35. ಕೆಲವು ವ್ಯಕ್ತಿಗಳು ಲೋಕನೌಕರರಾಗಿರತಕ್ಕದ್ದು

36. ಈ ಅಧಿನಿಯಮದ ಅಡಿ ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ

37. ರಾಜ್ಯ ಸರ್ಕಾರದ ನಿಯಂತ್ರಣ

38. ನಿರ್ದೇಶನಗಳನ್ನು ನೀಡುವುದಕ್ಕೆ ರಾಜ್ಯ ಸರ್ಕಾರದ ಅಧಿಕಾರ

39. ತೊಂದರೆಗಳ ನಿವಾರಣೆ

40. ನಿಯಮಗಳ ರಚನಾಧಿಕಾರ

41. ವಿನಿಯಮಗಳ ರಚನಾಧಿಕಾರ

ಅನುಸೂಚಿ

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**I**

**2012ರ ಅಧಿನಿಯಮ ಸಂಖ್ಯೆ 10.–** ರಾಜ್ಯ ಸರ್ಕಾರವು, ಬ್ರಿಟಿಷರೊಂದಿಗೆ ಹೋರಾಡಿದ ಮತ್ತು ಭಾರತದ ಸ್ವಾತಂತ್ರ್ಯಕ್ಕಾಗಿ ಸಿಪಾಯಿ ದಂಗೆಯಲ್ಲಿ ಭಾಗವಹಿಸಿದ ಮಹಾನ್ ವೀರ ವನಿತೆ ಕಿತ್ತೂರು ರಾಣಿ ಚೆನ್ನಮ್ಮಾಜಿಯ ದೇಶಭಕ್ತಿ ಮತ್ತು ತ್ಯಾಗ ಭಾವನೆಯನ್ನು ಪ್ರಸಾರ ಮಾಡಲು ಉದ್ದೇಶಿಸಿದೆ ಮತ್ತು ಮಹಾನ್ ವೀರ ವನಿತೆ ಕಿತ್ತೂರು ರಾಣಿ ಚೆನ್ನಮ್ಮಾಜಿಯ ಹಾಗೂ ಸಂಗೊಳ್ಳಿ ರಾಯಣ್ಣ ಮುಂತಾದ ಆಕೆಯ ಸಮಕಾಲೀನರ ಮತ್ತು ಬೆಂಬಲಿಗರ ಆ ಅವಧಿಗೆ ಸಂಬಂಧಿಸಿದ ಕಿತ್ತೂರು ಕ್ಷೇತ್ರ ವ್ಯಾಪ್ತಿ ಮತ್ತು ಸುತ್ತಮುತ್ತಲ ಪ್ರದೇಶಗಳಲ್ಲಿನ ಪಾರಂಪರಿಕ ಸ್ಥಳಗಳು, ಸ್ಮಾರಕಗಳನ್ನು ಸಂರಕ್ಷಿಸಿ ಅಭಿವೃದ್ಧಿಪಡಿಸುವುದಕ್ಕೂ ಉದ್ದೇಶಿಸಿದೆ.

ಆದ್ದರಿಂದ ಈ ವಿಧೇಯಕ.

(2011ರ ವಿಧಾನಪರಿಷತ್ತಿನ ವಿಧೇಯಕ ಸಂಖ್ಯೆ:47, ಕಡತ ಸಂಖ್ಯೆ: ಸಂವ್ಯಶಾಇ 49 ಶಾಸನ 2011)

(ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 5 ಮತ್ತು 12 ಹಾಗೂ 3ನೇ ಪಟ್ಟಿಯ 40ನೆಯ ನಮೂದನೆಯಡಿಯಲ್ಲಿ ಬರುತ್ತದೆ.)

II

**2025ರ ಅಧಿನಿಯಮ ಸಂಖ್ಯೆ: 52** ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾವುದೇ ಇತರ ಮಂತ್ರಿಯವರು ಕಿತ್ತೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗುವ ಕುರಿತಾದ ಉಪಬಂಧವನ್ನು ಪರಿಷ್ಕರಿಸಲು, ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2011 (2012ರ ಕರ್ನಾಟಕ ಅಧಿನಿಯಮ ಸಂ. 10)ನ್ನು, ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

[2025ರ ವಿಧಾನ ಸಭೆಯ ವಿಧೇಯಕ ಸಂಖ್ಯೆ: 38, ಕಡತ ಸಂಖ್ಯೆ:ಸಂವ್ಯಶಾಇ 38 ಶಾಸನ 2025]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 5, 12 ಮತ್ತು 32ನೇ ನಮೂದನೆಯಡಿ ಬರುತ್ತದೆ.]
[ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ರಾಜ್ಯ ಪತ್ರಿಕೆ ಸಂಖ್ಯೆ:553, ದಿನಾಂಕ:09.09.2025 ರಲ್ಲಿ ಪ್ರಕಟಗೊಂಡಿದೆ.]

---

**2012 ರ ಕರ್ನಾಟಕ ಅಧಿನಿಯಮ ಸಂಖ್ಯೆ 10**

(2012ರ ಜನವರಿ ಇಪ್ಪತ್ನಾಲ್ಕನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

# ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2011

(2012ರ ಜನವರಿ ಹತ್ತೊಂಬತ್ತನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

(2025ರ ಅಧಿನಿಯಮ ಸಂಖ್ಯೆ 52 ರಲ್ಲಿ ತಿದ್ದುಪಡಿಯಾದಂತೆ)

ಬೆಳಗಾವಿ ಜಿಲ್ಲೆಯ ಕಿತ್ತೂರು ಗ್ರಾಮದಲ್ಲಿ ಮತ್ತು ಅದರ ಸುತ್ತಮುತ್ತ ಇರುವ ಪರಂಪರೆಯ ತಾಣಗಳ ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ಒಂದು ಪ್ರಾಧಿಕಾರವನ್ನು ಸ್ಥಾಪಿಸುವುದಕ್ಕಾಗಿ ಉಪಬಂಧ ಕಲ್ಪಿಸಲು ಒಂದು ಅಧಿನಿಯಮ.

ಬೆಳಗಾವಿ ಜಿಲ್ಲೆಯ, ಬೈಲಹೊಂಗಲ ತಾಲ್ಲೂಕಿನ ಕಿತ್ತೂರು ಗ್ರಾಮದಲ್ಲಿ ಮತ್ತು ಅದರ ಸುತ್ತಮುತ್ತ ಇರುವ ಪರಂಪರೆಯ ತಾಣಗಳನ್ನು ಅಂತರರಾಷ್ಟ್ರೀಯ ಯಾತ್ರಾ ಸ್ಥಳವನ್ನಾಗಿ, ಸಾಂಸ್ಕೃತಿಕ ಮತ್ತು ಪ್ರವಾಸ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲು ಮತ್ತು ಅದನ್ನು ನಿರ್ವಹಿಸಲು ಒಂದು ಪ್ರಾಧಿಕಾರವನ್ನು ಸ್ಥಾಪಿಸಲು ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು.

## ಅಧ್ಯಾಯ - I

## ಪ್ರಾರಂಭಿಕ

**1. ಚಿಕ್ಕ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2011 ಎಂದು ಕರೆಯತಕ್ಕದ್ದು.

(2) ಇದು, 2ನೇ ಪ್ರಕರಣದ (ಸಿ)ಖಂಡದಲ್ಲಿ ಪರಿಭಾಷಿಸಿದಂತೆ ಕಿತ್ತೂರು ಗ್ರಾಮದ ಪ್ರದೇಶಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು, ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

(ಈ ಅಧಿನಿಯಮವು ಅಧಿಸೂಚನೆ ಸಂಖ್ಯೆ: ಕಂಇ 158 ಆರ್‌ಇಎಚ್ 2011 (ಭಾಗ–1), ದಿನಾಂಕ: 02.07.2012ರ ಮೂಲಕ ದಿನಾಂಕ: 02.07.2012ರಿಂದ ಜಾರಿಗೆ ಬಂದಿದೆ. ಅಧಿಸೂಚನೆಯನ್ನು ಅಧಿನಿಯಮದ ಕೊನೆಯಲ್ಲಿ ನೋಡಬಹುದು.)

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಸೌಕರ್ಯ" ಎಂಬುದರಲ್ಲಿ ರಸ್ತೆಗಳು, ಬೀದಿಗಳು, ಸುರಂಗ ಮಾರ್ಗಗಳು, ದೀಪದ ವ್ಯವಸ್ಥೆ, ಚರಂಡಿ ವ್ಯವಸ್ಥೆ, ನೈರ್ಮಲೀಕರಣ, ವಿದ್ಯುಚ್ಛಕ್ತಿ ಮತ್ತು ನೀರು ಸರಬರಾಜು ಅಥವಾ ಇತರ

ಅನುಕೂಲತೆಗಳು, ಲೋಕೋಪಯೋಗಿ ಕಾಮಗಾರಿಗಳು, ಮಾರುಕಟ್ಟೆ ಸ್ಥಳಗಳು, ಆಸ್ಪತ್ರೆಗಳು, ಚಿಕಿತ್ಸಾಲಯಗಳು, ಗ್ರಂಥಾಲಯಗಳು, ಮನರಂಜನಾ ಕೇಂದ್ರಗಳು, ಪ್ರಾಧಿಕಾರವು ಅಧಿಕೃತಗೊಳಿಸಿದ ಯಾವುದೇ ಸಾರ್ವಜನಿಕ ಉಪಯುಕ್ತ ಸೇವೆಯ ಸೇವಾ ಕೇಂದ್ರಗಳು ಅಥವಾ ಇತರ ಸೌಲಭ್ಯ; ಮತ್ತು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ಇತರ ಸೌಕರ್ಯಗಳನ್ನು ಒಳಗೊಳ್ಳುತ್ತದೆ;

(ಬಿ) **"ಪ್ರಾಧಿಕಾರ"** ಎಂದರೆ, 3ನೇ ಪ್ರಕರಣದ ಅಡಿಯಲ್ಲಿ ರಚಿಸಿದ ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ;

(ಸಿ) **"ಕಿತ್ತೂರು"** ಎಂದರೆ, ಕಿತ್ತೂರು ಗ್ರಾಮದ ಹಾಗೂ ಕಿತ್ತೂರು ಗ್ರಾಮಪಂಚಾಯಿತಿಯ ಮಿತಿಗಳು ಮತ್ತು ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನಲ್ಲಿರುವ ಕಿತ್ತೂರು ಗ್ರಾಮವ್ಯಾಪ್ತಿಯ ಪ್ರದೇಶ ಮತ್ತು ಕಿತ್ತೂರಿನಲ್ಲಿರುವ ಪಾರಂಪರಿಕ ತಾಣಗಳ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಆರ್ಜಿಸಿದ ಭೂಮಿ ಮತ್ತು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಘೋಷಿಸಲಾದ ಅಂಥ ಇತರ ಪ್ರದೇಶ ಮತ್ತು ಇವುಗಳೆಲ್ಲವನ್ನೂ ಒಳಗೊಳ್ಳುತ್ತದೆ;

(ಡಿ) "ಅಧ್ಯಕ್ಷ" ಎಂದರೆ, ಪ್ರಾಧಿಕಾರದ ಅಧ್ಯಕ್ಷ;

(ಇ) "ಆಯುಕ್ತ" ಎಂದರೆ, 10ನೇ ಪ್ರಕರಣದ ಅಡಿಯಲ್ಲಿ ನೇಮಕ ಮಾಡಿದ ಪ್ರಾಧಿಕಾರದ ಆಯುಕ್ತ;

(ಎಫ್) "ನಿಧಿ" ಎಂದರೆ, ಪ್ರಾಧಿಕಾರದ ನಿಧಿ;

(ಜಿ) "ಪರಂಪರೆಯ ತಾಣ" ಎಂದರೆ, ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಹಾಗೂ ಅವಶೇಷಗಳ ಅಧಿನಿಯಮ, 1958ರ (1958ರ ಕೇಂದ್ರ ಅಧಿನಿಯಮ ಸಂಖ್ಯೆ 24) ಅಡಿಯಲ್ಲಿ ಸಂರಕ್ಷಿತ ಪ್ರದೇಶವೆಂದು ಉಲ್ಲೇಖಿಸಲಾದ ಪ್ರದೇಶವನ್ನು ಹೊರತುಪಡಿಸಿ ಅನುಸೂಚಿಯಲ್ಲಿ ನಿರ್ಧಿಷ್ಟಪಡಿಸಿದ ತಾಣಗಳನ್ನು ಒಳಗೊಳ್ಳುವ ಸಂಪೂರ್ಣ ಪ್ರದೇಶವಾಗಿದೆ;

(ಹೆಚ್) "ಸದಸ್ಯ" ಎಂದರೆ, ಪ್ರಾಧಿಕಾರದ ಸದಸ್ಯ;

(ಐ) "ವಿನಿಯಮಗಳು" ಎಂದರೆ, 41ನೇ ಪ್ರಕರಣದ ಮೇರೆಗೆ ರಚಿಸಿದ ಪ್ರಾಧಿಕಾರದ ವಿನಿಯಮಗಳು;

(ಜೆ) "ಅನುಸೂಚಿ**"** ಎಂದರೆ, ಈ ಅಧಿನಿಯಮಕ್ಕೆ ಲಗತ್ತಿಸಿದ ಅನುಸೂಚಿ.

## ಅಧ್ಯಾಯ – II

## ಪ್ರಾಧಿಕಾರಗಳು ಮತ್ತು ಅದರ ಉದ್ಯೋಗಿಗಳು

**3. ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೆ, ಈ ಅಧಿನಿಯಮದ ಉದ್ದೇಶಗಳಿಗಾಗಿ ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ರಚಿಸತಕ್ಕದ್ದು.

(2) ಪ್ರಾಧಿಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದ ಅಂಥ ಸ್ಥಳದಲ್ಲಿ ಪ್ರಾಧಿಕಾರವು ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಪ್ರಾಧಿಕಾರವು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಮತ್ತು ವಿಲೆ ಮಾಡುವ ಮತ್ತು ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(4) ಪ್ರಾಧಿಕಾರವು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

[1][(ಎ) ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾರೇ ಇತರ ಮಂತ್ರಿ - ಪದನಿಮಿತ್ತ ಅಧ್ಯಕ್ಷರು.][1]

1. 2025 ರ ಅಧಿನಿಯಮ ಸಂಖ್ಯೆ:52ರ ಮೂಲಕ ದಿ:09.09.2025 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ

(ಬಿ) ಬೆಳಗಾವಿ ಜಿಲ್ಲೆಯ ಉಸ್ತುವಾರಿ ಪ್ರಭಾರದಲ್ಲಿರುವ ಸಚಿವರು ಪ್ರಾಧಿಕಾರದ ಪದನಿಮಿತ್ತ ಉಪಾಧ್ಯಕ್ಷರಾಗಿರತಕ್ಕದ್ದು;

(ಸಿ) ಕನ್ನಡ ಮತ್ತು ಸಂಸ್ಕೃತಿ ಸಚಿವರು – ಪದನಿಮಿತ್ತ ಸದಸ್ಯರು;

(ಡಿ) ಕಂದಾಯ ಸಚಿವರು – ಪದನಿಮಿತ್ತ ಸದಸ್ಯರು;

(ಇ) ಪ್ರವಾಸೋದ್ಯಮ ಸಚಿವರು – ಪದನಿಮಿತ್ತ ಸದಸ್ಯರು;

(ಎಫ್) ಲೋಕೋಪಯೋಗಿ ಸಚಿವರು – ಪದನಿಮಿತ್ತ ಸದಸ್ಯರು;

(ಜಿ) ಕಿತ್ತೂರು ಗ್ರಾಮವು ಭಾಗಶ: ಅಥವಾ ಸಂಪೂರ್ಣವಾಗಿ ಯಾರ ಚುನಾವಣಾ ಕ್ಷೇತ್ರದ ವ್ಯಾಪ್ತಿಯೊಳಗೆ ಬರುತ್ತದೋ ಆ ಕ್ಷೇತ್ರವನ್ನು ಪ್ರತಿನಿಧಿಸುವ ಸಂಸತ್ ಸದಸ್ಯರು ಮತ್ತು ರಾಜ್ಯ ವಿಧಾನಮಂಡಲದ ಸದಸ್ಯರು – ಸದಸ್ಯರು;

(ಹೆಚ್) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ – ಪದನಿಮಿತ್ತ ಸದಸ್ಯರು;

(ಐ) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ – ಪದನಿಮಿತ್ತ ಸದಸ್ಯರು;

(ಜೆ) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಣಕಾಸು ಇಲಾಖೆ – ಪದನಿಮಿತ್ತ ಸದಸ್ಯರು;

(ಕೆ) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ – ಪದನಿಮಿತ್ತ ಸದಸ್ಯರು;

(ಎಲ್) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ – ಪದನಿಮಿತ್ತ ಸದಸ್ಯರು;

(ಎಂ) ಪ್ರಾದೇಶಿಕ ಆಯುಕ್ತರು, ಬೆಳಗಾವಿ; – ಪದನಿಮಿತ್ತ ಸದಸ್ಯರು;

(ಎನ್) ಬೆಳಗಾವಿ ಜಿಲ್ಲೆಯ ಜಿಲ್ಲಾಧಿಕಾರಿಯವರು – ಪದನಿಮಿತ್ತ ಸದಸ್ಯರು;

(ಒ) ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ವಸ್ತು ಸಂಗ್ರಹಾಲಯ ಇಲಾಖೆ – ಪದನಿಮಿತ್ತ ಸದಸ್ಯರು;

(ಪಿ) ಜಂಟಿ –ನಿರ್ದೇಶಕರು, ಕರ್ನಾಟಕ ಭೂ ಸೇನಾ ನಿಗಮ, ಬೆಳಗಾವಿ – ಪದನಿಮಿತ್ತ ಸದಸ್ಯರು;

(ಕ್ಯೂ) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ –ಪದನಿಮಿತ್ತ ಸದಸ್ಯರು;

(ಆರ್) ಕಾರ್ಯನಿರ್ವಾಹಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಬೆಳಗಾವಿ – ಪದನಿಮಿತ್ತ ಸದಸ್ಯರು

(ಎಸ್) ಅಧ್ಯಕ್ಷರು, ಗ್ರಾಮಪಂಚಾಯಿತಿ, ಕಿತ್ತೂರು – ಪದನಿಮಿತ್ತ ಸದಸ್ಯರು

(ಟಿ) ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರಾದ ಮೂರು ಜನರ ಸಂಖ್ಯೆಯನ್ನು ಮೀರದಂತ ಸರ್ಕಾರೇತರ ಸದಸ್ಯರು – ಸದಸ್ಯರು

(ಯು) ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರಾದ ಕಿತ್ತೂರಿನ ಇತಿಹಾಸ ಮತ್ತು ಪರಂಪರೆಯಲ್ಲಿ ಆಳವಾದ ಜ್ಞಾನ ಹೊಂದಿರುವ ಐದು ಜನರ ಸಂಖ್ಯೆಯನ್ನು ಮೀರದಷ್ಟು ವ್ಯಕ್ತಿಗಳು – ಸದಸ್ಯರು

(ವಿ) ಪ್ರಾಧಿಕಾರದ ಆಯುಕ್ತರು – ಸದಸ್ಯ ಕಾರ್ಯದರ್ಶಿ

**4. ಪದಾವಧಿ ಮತ್ತು ಸೇವಾ ಷರತ್ತುಗಳು.–** (1) ರಾಜ್ಯ ಸರ್ಕಾರದ ಇಚ್ಛೆಗೊಳಪಟ್ಟು, ರಾಜ್ಯ ಸರ್ಕಾರವು ನಾಮನಿರ್ದೇಶಿಸಿದ ಸರ್ಕಾರೇತರ ಸದಸ್ಯರು ಮೂರು ವರ್ಷಗಳ ಅವಧಿಗೆ ಪದಧಾರಣ ಮಾಡತಕ್ಕದ್ದು.

(2) ಯಾವೊಬ್ಬ ಸರ್ಕಾರೇತರ ಸದಸ್ಯನು ತನ್ನ ಸಹಿಯೊಂದಿಗೆ ರಾಜ್ಯ ಸರ್ಕಾರಕ್ಕೆ ಬರೆಯುವ ಮೂಲಕ ತನ್ನ ಪದಕ್ಕೆ ರಾಜೀನಾಮೆ ನೀಡಬಹುದು. ಆದರೆ ಅವನ ರಾಜೀನಾಮೆಯು ಅಂಗೀಕಾರವಾಗುವವರೆಗೂ ಪದದಲ್ಲಿ ಮುಂದುವರೆಯತಕ್ಕದ್ದು.

(3) ಸರ್ಕಾರೇತರ ಸದಸ್ಯರು ನಿಯಮಿಸಬಹುದಾದಂಥ ಭತ್ಯಗಳನ್ನು ಪಡೆಯತಕ್ಕದ್ದು.

**5. ಸದಸ್ಯನ ಪದಕ್ಕೆ ಅನರ್ಹತೆಗಳು.–** ಸರ್ಕಾರೇತರ ಸದಸ್ಯರು,–

(ಎ) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದು ಕಾರಾವಾಸದ ಶಿಕ್ಷೆಗೆ ಗುರಿಯಾಗಿದ್ದರೆ; ಅಥವಾ

(ಬಿ) ಅಸ್ವಸ್ಥ ಚಿತ್ತದವನಾಗಿದ್ದರೆ ಮತ್ತು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿತನಾಗಿದ್ದರೆ; ಅಥವಾ

(ಸಿ) ಅವಿಮುಕ್ತ ದಿವಾಳಿಯಾಗಿದ್ದರೆ; ಅಥವಾ

(ಡಿ) ಕೇಂದ್ರ ಸರ್ಕಾರದ ಅಥವಾ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ಒಂದು ಸಂಸ್ಥೆ ಅಥವಾ

ನಿಗಮದ ಸೇವೆಯಿಂದ ತೆಗೆದು ಹಾಕಿದವನಾಗಿದ್ದರೆ ಅಥವಾ ವಜಾ ಮಾಡಿದವನಾಗಿದ್ದರೆ; ಅಥವಾ

(ಇ) ಪ್ರಾಧಿಕಾರದ ಆದೇಶದಿಂದ ಮಾಡಲಾದ ಯಾವುದೇ ಕಾರ್ಯದಲ್ಲಿ ಅಥವಾ ಪ್ರಾಧಿಕಾರದೊಡನೆ ಅಥವಾ ಅದರ ಅಡಿಯಲ್ಲಿ ಅಥವಾ ಅದರ ಮೂಲಕ ಅಥವಾ ಅದರ ಪರವಾದ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಸ್ವತಃ ಅವನು ಅಥವಾ ಪಾಲುದಾರನಾಗಿ ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಯಾವುದೇ ಷೇರನ್ನು ಅಥವಾ ಹಿತಾಸಕ್ತಿಯನ್ನು ಹೊಂದಿದ್ದರೆ; ಅಥವಾ

(ಎಫ್) ಪ್ರಾಧಿಕಾರದ ಪರವಾಗಿ ವೇತನ ಪಡೆಯುವ ನ್ಯಾಯವಾದಿಯಾಗಿ ನಿಯೋಜಿತನಾಗಿದ್ದರೆ ಅಥವಾ ಪ್ರಾಧಿಕಾರದ ವಿರುದ್ಧವಾಗಿ ನ್ಯಾಯವಾದಿಯ ನಿಯೋಜನೆಯನ್ನು ಒಪ್ಪಿಕೊಂಡಿದ್ದರೆ,

– ಅವರು ಸದಸ್ಯರಾಗಿ ನೇಮಕ ಹೊಂದಲು ಅಥವಾ ಸದಸ್ಯರಾಗಿರಲು ಅನರ್ಹನಾರಾಗಿರತಕ್ಕದ್ದು:

ಪರಂತು, ಒಬ್ಬ ವ್ಯಕ್ತಿಯು, ಪ್ರಾಧಿಕಾರದ ವ್ಯವಹಾರಗಳಿಗೆ ಸಂಬಂಧಪಟ್ಟಂತೆ ಯಾವುದೇ ಜಾಹೀರಾತನ್ನು ಸೇರಿಸಲಾದ ಯಾವುದೇ ವೃತ್ತ ಪತ್ರಿಕೆಯಲ್ಲಿ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂಬ ಕಾರಣ ಮಾತ್ರದಿಂದಲೇ (ಇ) ಖಂಡದ ಅಡಿಯಲ್ಲಿ ಅನರ್ಹನಾಗತಕ್ಕದ್ದಲ್ಲ ಅಥವಾ ಸದರಿ ಖಂಡದ ಅರ್ಥವ್ಯಾಪ್ತಿಯಲ್ಲಿ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಯಾವುದೇ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂದು ಭಾವಿಸತಕ್ಕದ್ದಲ್ಲ.

**6. ಸದಸ್ಯನನ್ನು ತೆಗೆದು ಹಾಕುವುದು.**– ರಾಜ್ಯ ಸರ್ಕಾರವು ಸರ್ಕಾರೇತರ ಸದಸ್ಯನನ್ನು,–

(ಎ) ಅವನು 5ನೇ ಪ್ರಕರಣದಲ್ಲಿ ಹೇಳಲಾದ ಅನರ್ಹತೆಗಳಲ್ಲಿ ಯಾವುದೇ ಅನರ್ಹತೆಗೆ ಒಳಪಟ್ಟರೆ:

ಪರಂತು, ಯಾವೊಬ್ಬ ಸದಸ್ಯನನ್ನು, ಅವನು ಆ ಪ್ರಕರಣದ (ಇ) ಖಂಡದಲ್ಲಿ ಹೇಳಲಾದ ಅನರ್ಹತೆಗೆ ಒಳಗಾಗಿದ್ದಾನೆಂಬ ಕಾರಣದ ಮೇಲೆ, ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಸಲ್ಲಿಸಲು ಅವನಿಗೆ ಒಂದು ಅವಕಾಶವನ್ನು ಕೊಟ್ಟ ಹೊರತು, ತೆಗೆದು ಹಾಕತಕ್ಕದ್ದಲ್ಲ; ಅಥವಾ

(ಬಿ) ಅವನು ಕಾರ್ಯ ನಿರ್ವಹಿಸಲು ನಿರಾಕರಿಸಿದರೆ ಅಥವಾ ಕಾರ್ಯವನ್ನು ನಿರ್ವಹಿಸಲು ಅಸಮರ್ಥನಾದರೆ; ಅಥವಾ

(ಸಿ) ಅವನು ಗೈರು ಹಾಜರಾಗಲು ಪ್ರಾಧಿಕಾರದಿಂದ ಅನುಮತಿ ಪಡೆಯದೆ ಪ್ರಾಧಿಕಾರದ ಮೂರು ನಿರಂತರ ಸಭೆಗಳಿಗೆ ಗೈರುಹಾಜರಾದರೆ:

ಪರಂತು, ಈ ಖಂಡವು ಪದನಿಮಿತ್ತ ಸದಸ್ಯರಿಗೆ ಅನ್ವಯವಾಗತಕ್ಕದ್ದಲ್ಲ; ಅಥವಾ

(ಡಿ) ಅವನನ್ನು ಆ ಪದದಲ್ಲಿ ಮುಂದುವರಿಸಿದರೆ, ಸಾರ್ವಜನಿಕ ಹಿತಾಸಕ್ತಿಗೆ ಬಾಧಕ ಉಂಟಾಗುವಂತೆ ತನ್ನ ಸ್ಥಾನವನ್ನು ದುರುಪಯೋಗಪಡಿಸಿಕೊಳ್ಳುವನೆಂದು ರಾಜ್ಯ ಸರ್ಕಾರವು ಅಭಿಪ್ರಾಯಪಟ್ಟರೆ,

– ಅವನನ್ನು ತೆಗೆದುಹಾಕತಕ್ಕದ್ದು:

ಪರಂತು, ಯಾವೊಬ್ಬ ಸದಸ್ಯನನ್ನು ಅವನಿಗೆ ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಹೇಳಿಕೊಳ್ಳಲು ಒಂದು ಅವಕಾಶವನ್ನು ಕೊಟ್ಟ ಹೊರತು ಈ ಖಂಡದ ಅಡಿಯಲ್ಲಿ ತೆಗೆದು ಹಾಕತಕ್ಕದ್ದಲ್ಲ.

**7. ಮರು ನೇಮಕಾತಿಗೆ ಅರ್ಹತೆ.**- ಯಾವೊಬ್ಬ ಸದಸ್ಯನು, ಸದಸ್ಯನಾಗಿರುವುದು ಸಮಾಪ್ತಿಯಾದಾಗ, 6ನೇ ಪ್ರಕರಣದಲ್ಲಿ ಹೇಳಲಾದ ಅನರ್ಹತೆಗೊಳಗಾಗದಿರುವಲ್ಲಿ, ಸದಸ್ಯನಾಗಿ ಮರುನೇಮಕ ಹೊಂದಲು ಅರ್ಹನಾಗಿರತಕ್ಕದ್ದು.

**8. ಪ್ರಾಧಿಕಾರದ ಅಧಿಕಾರಗಳು.**- (1) ಈ ಅಧಿನಿಯಮದ ಉದ್ದೇಶಗಳು ಮತ್ತು ಉಪಬಂಧಗಳನ್ನು ಪರಿಣಾಮಗೊಳಿಸಲು ಪ್ರಾಧಿಕಾರವು ಅವಶ್ಯಕವೆಂದು ಅಭಿಪ್ರಾಯಪಡುವಂಥ ಯಾವುವೇ ಕಾರ್ಯಗಳನ್ನು ಮಾಡುವುದಕ್ಕೆ ಸಾಮಾನ್ಯವಾಗಿ ಪ್ರಾಧಿಕಾರವು ಅಧಿಕಾರ ಹೊಂದಿರತಕ್ಕದ್ದು:

ಪರಂತು, ಈ ಪ್ರಕರಣದಲ್ಲಿ ಇರುವುದು ಯಾವುದೂ, ಇತರ ಪ್ರಾಧಿಕಾರವು ನೆರವೇರಿಸಬೇಕೆಂದು ಅಧಿನಿಯಮದಲ್ಲಿ ನಿರ್ದಿಷ್ಟವಾಗಿ ಹೇಳಿದಂಥ ಯಾವುದೇ ಕಾರ್ಯವನ್ನು ನೆರವೇರಿಸಲು ಈ ಪ್ರಾಧಿಕಾರವನ್ನು ಅಧಿಕೃತಗೊಳಿಸಲಾಗಿದೆಯೆಂದು ಭಾವಿಸತಕ್ಕದ್ದಲ್ಲ.

(2) ಅಧಿನಿಯಮದ (1)ನೇ ಉಪಪ್ರಕರಣದ ಸಾಮಾನ್ಯಾನ್ವಯಕ್ಕೆ ಬಾಧಕವಾಗದಂತೆ ಪ್ರಾಧಿಕಾರವು,

(ಎ) ನಿಯಮಿಸಬಹುದಾಂತಹ ನಿಯಮಗಳಿಗೆ ಒಳಪಟ್ಟು ಈ ಅಧಿನಿಯಮದ ಯಾವುದೇ ಉದ್ದೇಶವನ್ನು ನೆರವೇರಿಸಲು ಅವಶ್ಯಕ ಅಥವಾ ಯುಕ್ತವೆಂದು ತಾನು ಪರಿಗಣಿಸುವಂತಹ ಎಲ್ಲ ಕರಾರುಗಳನ್ನು ಮಾಡಿಕೊಳ್ಳಲು ಮತ್ತು ನೆರವೇರಿಸಲು ಹಾಗೂ ಪ್ರತಿಯೊಂದು ಕರಾರನ್ನು ಪ್ರಾಧಿಕಾರದ ಪರವಾಗಿ ಪ್ರಾಧಿಕಾರದ ಆಯುಕ್ತರು ಮಾಡಿಕೊಳ್ಳತಕ್ಕದ್ದು:

ಪರಂತು, ಐದು ಲಕ್ಷ ರೂಪಾಯಿಗಳು ಅಥವಾ ಅದಕ್ಕೂ ಹೆಚ್ಚು ವೆಚ್ಚವನ್ನೊಳಗೊಳ್ಳುವ ಯಾವ ಕರಾರನ್ನು ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿ ಇಲ್ಲದೇ ಮಾಡಿಕೊಳ್ಳತಕ್ಕದ್ದಲ್ಲ.

(ಬಿ) ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿಯೊಂದಿಗೆ ಮತ್ತು ಈ ಸಂಬಂಧವಾಗಿ ನಿಯಮಿಸಬಹುದಾದಂತಹ ಷರತ್ತಿಗೊಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ ಕಾಲಕಾಲಕ್ಕೆ ಅಗತ್ಯವಾಗುವ ಯಾವುದೇ ಮೊಬಲಗನ್ನು ಸಾಲವಾಗಿ ಪಡೆಯಲು;

(ಸಿ) 37ನೇ ಪ್ರಕರಣಕ್ಕೆ ಒಳಪಟ್ಟು ಮತ್ತು ನಿಯಮಿಸಬಹುದಾದಂತಹ ನಿರ್ಬಂಧಗಳು, ಷರತ್ತುಗಳು ಮತ್ತು ಪರಿಮಿತಿಗಳಿಗೆ ಒಳಪಟ್ಟು ತನಗೆ ಸೇರಿದ ಚರ ಅಥವಾ ಸ್ಥಿರ ಸ್ವತ್ತಿನ್ನು ಗುತ್ತಿಗೆ, ಮಾರಾಟ ಅಥವಾ ಇತರ ರೀತಿಯಲ್ಲಿ ವರ್ಗಾವಣೆ ಮಾಡಲು ಮತ್ತು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಅಭಿವೃದ್ಧಿ ಯೋಜನೆಯ ಉದ್ದೇಶಕ್ಕಾಗಿ ತನ್ನಲ್ಲಿ ನಿಹಿತವಾಗಿರುವ ಅಥವಾ ತಾನು ಆರ್ಜಿಸಿದ ಯಾವುದೇ ಭೂಮಿಯನ್ನು ಮೈದಾನಗಳನ್ನು ರೂಪಿಸುವಾಗ ಅಥವಾ ಕಟ್ಟಡ ನಿರ್ಮಿಸುವ ಉದ್ದೇಶಗಳಿಗಾಗಿ ಅಥವಾ ಇನ್ಯಾವುದೇ ಇತರ ರೀತಿಯಲ್ಲಿ ವಿನಿಯೋಗಿಸಲು ಅಥವಾ ಬಳಸಲು,

– ಅಧಿಕಾರವನ್ನು ಹೊಂದಿರತಕ್ಕದ್ದು.

**9. ಪ್ರಾಧಿಕಾರದ ಉಪ ಸಮಿತಿಗಳು.–** (1) ಪ್ರಾಧಿಕಾರವು, ಯಾವುದೇ ನಿರ್ದಿಷ್ಟ ಉದ್ದೇಶಕ್ಕಾಗಿ, ಆಯುಕ್ತನು ಅಧ್ಯಕ್ಷನಾಗಿರುವ ಮತ್ತು ಪ್ರತಿಯೊಂದು ಉಪಸಮಿತಿಗೆ ಐದು ಜನರಿಗೆ ಮೀರದಂಥ ಇತರ ಸದಸ್ಯರಿರುವ ಒಂದು ಅಥವಾ ಹೆಚ್ಚು ಉಪಸಮಿತಿಗಳನ್ನು ರಚಿಸಬಹುದು. ಉಪಸಮಿತಿಯು ಪರ್ಯಾಲೋಚಿಸಿ ತೀರ್ಮಾನಿಸಿದ ಯಾವುದೇ ವಿಷಯವನ್ನು ಅನುಮೋದನೆ ಅಥವಾ ನಿರಾಕರಣೆಗಾಗಿ ಪ್ರಾಧಿಕಾರದ ಸಭೆಯಲ್ಲಿ ಮಂಡಿಸತಕ್ಕದ್ದು. ನಿರ್ಣಯವನ್ನು ಉಪಸಮಿತಿಗೆ ಹಿಂದಿರುಗಿಸಬಹುದು.

(2) ಉಪಸಮಿತಿಗಳು ಪ್ರಾಧಿಕಾರವು ಪ್ರತ್ಯಾಯೋಜಿಸಿದಂತಹ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂತಹ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(3) ಪ್ರತಿಯೊಂದು ಉಪಸಮಿತಿಯು ಕನಿಷ್ಠ ಪಕ್ಷ ಮೂರು ತಿಂಗಳಿಗೆ ಒಂದು ಸಲವಾದರೂ ಸಭೆ ಸೇರತಕ್ಕದ್ದು ಮತ್ತು ವಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬಹುದಾದಂತೆ ಅದರ ಸಭೆಯ ಕಾರ್ಯಕಲಾಪಗಳಿಗೆ ಸಂಬಂಧಿಸಿದ ಅಂತಹ ಪ್ರಕ್ರಿಯಾ ನಿಯಮಗಳನ್ನು ಪಾಲಿಸತಕ್ಕದ್ದು.

**10. ಆಯುಕ್ತನ ನೇಮಕಾತಿ.–** (1) ರಾಜ್ಯ ಸರ್ಕಾರವು, ಸರ್ಕಾರದ ಉಪ ಕಾರ್ಯದರ್ಶಿ ದರ್ಜೆಗೆ ಕಡಿಮೆಯಲ್ಲದ ದರ್ಜೆಯ ಅಧಿಕಾರಿಯನ್ನು ಪ್ರಾಧಿಕಾರದ ಆಯುಕ್ತನಾಗಿ ನೇಮಿಸತಕ್ಕದ್ದು;

(2) ಆಯುಕ್ತನು, ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ವೇತನ ಮತ್ತು ಇತರ ಭತ್ಯಗಳನ್ನು ಸ್ವೀಕರಿಸತಕ್ಕದ್ದು. ಆಯುಕ್ತನ ಸೇವಾ ಷರತ್ತುಗಳು ಕರ್ನಾಟಕ ಸಿವಿಲ್ ಸೇವಾ ನಿಯಮಗಳಿಗೆ ಒಳಪಡತಕ್ಕದ್ದು.

(3) ರಾಜ್ಯ ಸರ್ಕಾರವು, ತಾನು ಯುಕ್ತವೆಂದು ಭಾವಿಸುವಂಥ ಅವಧಿಗೆ ಆಯುಕ್ತನಿಗೆ ಗೈರು ಹಾಜರಾಗಲು ಅನುಮತಿ ನೀಡಬಹುದು.

**11. ಆಯುಕ್ತನ ಅಧಿಕಾರಗಳು ಮತ್ತು ಕರ್ತವ್ಯಗಳು.–** (1) ಆಯುಕ್ತನು, ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕ ಮತ್ತು ಆಡಳಿತಾಧಿಕಾರಿಯಾಗಿರತಕ್ಕದ್ದು.

(2) ಆಯುಕ್ತನು, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ತನಗೆ ಪ್ರದತ್ತವಾಗಿರುವಂತಹ ಪ್ರಕಾರ್ಯಗಳನ್ನು ನೆರವೇರಿಸುವುದರ ಜೊತೆಗೆ,–

(ಎ) ಪ್ರಾಧಿಕಾರದ ಗೊತ್ತುವಳಿಗಳನ್ನು ಕಾರ್ಯಗತಗೊಳಿಸತಕ್ಕದ್ದು;

(ಬಿ) ಪ್ರಾಧಿಕಾರದ ವ್ಯವಹಾರವನ್ನು ನಡೆಸುವುದು ಮತ್ತು ಪತ್ರ ವ್ಯವಹಾರವನ್ನು ನಡೆಸುವುದು;

(ಸಿ) ಸರ್ಕಾರವು ನಿರ್ದೇಶಿಸಬಹುದಾದಂಥ ಯೋಜನೆಗಳನ್ನು ಕಾರ್ಯಗತಗೊಳಿಸುವುದು ಮತ್ತು ಕಾಮಗಾರಿಗಳನ್ನು ನಿರ್ವಹಿಸುವುದು;

(ಡಿ) ಪ್ರಾಧಿಕಾರದ ಯೋಜನೆಗಳ ಅನುಷ್ಠಾನಕ್ಕೆ ಜವಾಬ್ದಾರರಾಗಿರತಕ್ಕದ್ದು.

(ಇ) ಪ್ರಾಧಿಕಾರದ ಬ್ಯಾಂಕ್ ಖಾತೆಗಳಲ್ಲಿ ವ್ಯವಹಾರ ನಡೆಸತಕ್ಕದ್ದು ಮತ್ತು ಪ್ರಾಧಿಕಾರದ ಲೆಕ್ಕಪತ್ರಗಳನ್ನು ನಿರ್ವಹಿಸಲು ಜವಾಬ್ದಾರರಾಗಿರತಕ್ಕದ್ದು;

(ಎಫ್) ಪ್ರಾಧಿಕಾರದ ಅಧಿಕಾರಿಗಳು ಮತ್ತು ನೌಕರರ ಮೇಲೆ ಕಾರ್ಯನಿರ್ವಹಣೆಗೆ ಆಡಳಿತ ವಿಷಯಗಳು ಮತ್ತು ಅಂತಹ ಅಧಿಕಾರಿಗಳು ಮತ್ತು ನೌಕರರ ಸೇವಾ ವಿಷಯಗಳು ಹಾಗೂ ಅವರ ವೇತನ ಮತ್ತು ಭತ್ಯೆಗಳನ್ನು ವಿನಿಯಮನಗೊಳಿಸುವ ಬಗ್ಗೆ ಮೇಲ್ವಿಚಾರಣೆ ಹಾಗೂ ನಿಯಂತ್ರಣವನ್ನು ಹೊಂದಿರತಕ್ಕದ್ದು.

(ಜಿ) ಪ್ರಾಧಿಕಾರದ ಸಂಕ್ಷಿಪ್ತ ಟಿಪ್ಪಣಿಗಳ ಮತ್ತು ಯಾವುದೇ ವಿವರ ಪತ್ರದ ಪ್ರತಿಯನ್ನು ಅಥವಾ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಕೋರಬಹುದಾದ ಇತರ ಮಾಹಿತಿಯನ್ನು ರಾಜ್ಯ ಸರ್ಕಾರಕ್ಕೆ ಒದಗಿಸತಕ್ಕದ್ದು.

(ಎಚ್) ಈ ಅಧಿನಿಯಮದ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಇತರ ಯಾವುದೇ ಕಾನೂನಿನ ಮೂಲಕ ಅಥವಾ ಅದರ ಅಡಿಯಲ್ಲಿ ಆತನಿಗೆ ಪ್ರದತ್ತವಾದ ಅಂಥ ಇತರ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.

**12. ಪ್ರಾಧಿಕಾರದ ನೌಕರರು.–** (1) ನಿಯಮಿಸಬಹುದಾದಂತಹ ನಿಯಮಗಳಿಗೊಳಪಟ್ಟು ಪ್ರಾಧಿಕಾರವು, ಅಧಿನಿಯಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಅದು ಅವಶ್ಯವೆಂದು ಭಾವಿಸುವಂತಹ ಸಂಖ್ಯೆಯ ನೌಕರರನ್ನು ನೇಮಕ ಮಾಡಿಕೊಳ್ಳಬಹುದು:

ಪರಂತು, ರಾಜ್ಯ ಸರ್ಕಾರವು ಭಾರತೀಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಸೇವೆಯಿಂದ ಅಥವಾ ಕರ್ನಾಟಕ ರಾಜ್ಯ ಲೆಕ್ಕಪತ್ರ ಸೇವೆಗಳಿಂದಾಗಲಿ "ಎ" ಗುಂಪಿನ ಕಿರಿಯ ವೇತನ ಶ್ರೇಣಿಯ ದರ್ಜೆಗಿಂತ ಕಡಿಮೆಯಲ್ಲದ ಅಧಿಕಾರಿಯನ್ನು ಪ್ರತಿನಿಯೋಜನೆಯ ಮೇಲೆ ಹಣಕಾಸು ಮತ್ತು ಲೆಕ್ಕಪತ್ರ ನಿಯಂತ್ರಣಾಧಿಕಾರಿಯಾಗಿ ನೇಮಕ ಮಾಡತಕ್ಕದ್ದು.

(2) ಹಣಕಾಸು ಮತ್ತು ಲೆಕ್ಕಪತ್ರ ನಿಯಂತ್ರಣಾಧಿಕಾರಿಯು ಆಯುಕ್ತನಿಗೆ ವರದಿ ಸಲ್ಲಿಸತಕ್ಕದ್ದು ಮತ್ತು ಪ್ರಾಧಿಕಾರದ ಹಣಕಾಸು ವ್ಯವಹಾರಗಳ ಬಗ್ಗೆ ವಾಸ್ತವಿಕವಾದ ಹಾಗೂ ನ್ಯಾಯವಾದ ಚಿತ್ರಣವನ್ನು ನೀಡುವ ಮೂಲಕ ಹಣಕಾಸು ನಿಯಮಗಳನ್ನು ಪಾಲಿಸಲಾಗುತ್ತಿದೆ ಮತ್ತು ಲೆಕ್ಕಪತ್ರಗಳನ್ನು ಅಂದಂದಿನವರೆಗೆ ನಿರ್ವಹಿಸಲಾಗುತ್ತಿದೆಯೆಂಬುದನ್ನು ಖಚಿತಪಡಿಸತಕ್ಕದ್ದು.

(3) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೌಕರರ ವೇತನಗಳು, ತುಟ್ಟಿ ಭತ್ಯೆಗಳು ಮತ್ತು ಇತರ ಸೇವಾ ಷರತ್ತುಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಆಯುಕ್ತನು ಪ್ರಾಧಿಕಾರದ ನೌಕರರಿಗೆ ಸಂಬಂಧಿಸಿದಂತೆ ನೇಮಕಾತಿ ಅಧಿಕಾರಿಯಾಗಿರತಕ್ಕದ್ದು ಮತ್ತು ಪ್ರಾಧಿಕಾರದ ಸಿಬ್ಬಂದಿಯ ಮೇಲೆ ಸಾಮಾನ್ಯ ನಿಯಂತ್ರಣ ಮತ್ತು ಮೇಲ್ವಿಚಾರಣೆಯನ್ನು ಹೊಂದಿರತಕ್ಕದ್ದು.

**13. ಪ್ರಾಧಿಕಾರದ ಅಡಿಯಲ್ಲಿನ ಸೇವೆಗಳಿಗಾಗಿ ಸಾಮಾನ್ಯ ಅನರ್ಹತೆಗಳು.–** ಯಾವೊಬ್ಬ ವ್ಯಕ್ತಿಯು ಖುದ್ದಾಗಿ ಅಥವಾ ಅವನ ಪಾಲುದಾರನ ಮೂಲಕ ಅಥವಾ ಅವನ ಏಜೆಂಟ್‌ನ ಮೂಲಕ, ಪ್ರಾಧಿಕಾರದ ಮೂಲಕ ಅಥವಾ ಅದರ ಪರವಾಗಿ ಯಾವುದೇ ಕರಾರಿನಲ್ಲಿ ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಷೇರು ಅಥವಾ

ಹಿತಾಸಕ್ತಿಯನ್ನು ಹೊಂದಿದ್ದರೆ, ಪ್ರಾಧಿಕಾರದ ಅಧಿಕಾರಿ ಅಥವಾ ಉದ್ಯೋಗಿಯಾಗತಕ್ಕದ್ದಲ್ಲ ಅಥವಾ ಆಗಿರತಕ್ಕದ್ದಲ್ಲ.

**14. ಪ್ರಾಧಿಕಾರದ ಸಭೆಗಳು.-** (1) ಪ್ರಾಧಿಕಾರದ ಆಯುಕ್ತರು, ಪ್ರಾಧಿಕಾರದ ಅಧ್ಯಕ್ಷರ ಪೂರ್ವಾನುಮತಿಯೊಂದಿಗೆ ಮತ್ತು ಅಧ್ಯಕ್ಷರು ಯುಕ್ತವೆಂದು ಭಾವಿಸಬಹುದಾದಂತಹ ಅವಧಿಗಳ ಅಂತರದಲ್ಲಿ ಮತ್ತು ಅಧ್ಯಕ್ಷರು ನಿರ್ಧರಿಸ ಬಹುದಾದಂತಹ ಸ್ಥಳದಲ್ಲಿ ಪ್ರಾಧಿಕಾರದ ಸಭೆಗಳನ್ನು ನಡೆಸತಕ್ಕದ್ದು:

ಪರಂತು, ಪ್ರಾಧಿಕಾರವು ಒಂದು ಕ್ಯಾಲೆಂಡರ್ ವರ್ಷದಲ್ಲಿ ಕನಿಷ್ಠ ಎರಡು ಬಾರಿಯಾದರೂ ಸಭೆ ಸೇರಿಸತಕ್ಕದ್ದು.

(2) ಪ್ರತಿಯೊಂದು ಸಭೆಯಲ್ಲಿ ಅಧ್ಯಕ್ಷನು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಯಾವುದೇ ಕಾರಣದಿಂದಾಗಿ ಅಧ್ಯಕ್ಷನಿಗೆ ಯಾವುದೇ ಸಭೆಗೆ ಹಾಜರಾಗಲು ಸಾಧ್ಯವಾಗದಿದ್ದರೆ, ಉಪಾಧ್ಯಕ್ಷನು ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು, ಯಾವುದೇ ಕಾರಣದಿಂದಾಗಿ ಉಪಾಧ್ಯಕ್ಷನು ಸಭೆಗೆ ಹಾಜರಾಗಲು ಸಾಧ್ಯವಾಗದಿದ್ದರೆ, ಸಭೆಯಲ್ಲಿ ಹಾಜರಿರುವ ಸದಸ್ಯರ ಪೈಕಿ ಆಯ್ಕೆ ಮಾಡಲಾಗುವ ಯಾವೊಬ್ಬ ಇತರ ಸದಸ್ಯನು ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು.

(3) ಪ್ರಾಧಿಕಾರದ ತೀರ್ಮಾನಗಳನ್ನು ಹಾಜರಿದ್ದು ಮತ ಹಾಕುವ ಸದಸ್ಯರ ಅವಿರೋಧ ಸಮ್ಮತಿ ಸೂಚಕ ಮೂಲಕ ಕೈಗೊಳ್ಳತಕ್ಕದ್ದು. ಪ್ರಾಧಿಕಾರದ ಮುಂದೆ ತೀರ್ಮಾನಕ್ಕಾಗಿ ಬಂದ ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುದೇ ಭಿನ್ನಾಭಿಪ್ರಾಯಗಳಿದ್ದಲ್ಲಿ ಆಯುಕ್ತನು ಆ ವಿಷಯವನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ವಿಷಯಗಳ ಬಗ್ಗೆ ರಾಜ್ಯ ಸರ್ಕಾರದ ತೀರ್ಮಾನವು ಅಂತಿವಾಗಿರತಕ್ಕದ್ದು.

(4) ಪ್ರಾಧಿಕಾರದ ಆಯುಕ್ತರು, ಪ್ರಾಧಿಕಾರದ ತೀರ್ಮಾನಗಳನ್ನು ಕಾರ್ಯಗತಗೊಳಿಸತಕ್ಕದ್ದು:

ಪರಂತು, ಪ್ರಾಧಿಕಾರವು ಕೈಗೊಂಡ ನಿರ್ಣಯವು ಈ ಅಧಿನಿಯಮದ ಅಥವಾ ಇತರ ಕಾನೂನಿನ ಉಪಬಂಧವನ್ನು ಅಥವಾ ಈ ಅಧಿನಿಯಮದ ಅಥವಾ ಇತರ ಯಾವುದೇ ಕಾನೂನಿನ ಅಡಿಯಲ್ಲಿ ರಚಿಸಲಾದ ಅಥವಾ ಹೊರಡಿಸಿದ ಯಾವುದೇ ನಿಯಮ ಅಥವಾ ಅಧಿಸೂಚನೆ ಅಥವಾ ವಿನಿಯಮಗಳ ಉಪಬಂಧವನ್ನು ಅಥವಾ ರಾಜ್ಯ ಸರ್ಕಾರವು ಹೊರಡಿಸಿದ ಯಾವುದೇ ಆದೇಶವನ್ನು ಉಲ್ಲಂಘಿಸುತ್ತದೆಯೆಂದು ಅಥವಾ ಪ್ರಾಧಿಕಾರದ ಹಿತಾಸಕ್ತಿಗೆ ಅಥವಾ ಕಿತ್ತೂರು ಕ್ಷೇತ್ರದ ಅಭಿವೃದ್ಧಿ ಮತ್ತು ನಿರ್ವಹಣೆಗೆ ಧಕ್ಕೆ ಉಂಟುಮಾಡುತ್ತದೆ ಅಥವಾ ಹಾನಿಕಾರಕವಾಗುತ್ತದೆಯೆಂದು ಆಯುಕ್ತರು ಭಾವಿಸಿದರೆ, ಅವರು ನಿರ್ಣಯವನ್ನು ಅನುಮೋದಿಸಲಾದ ಹದಿನೈದು ದಿನಗಳ ಒಳಗಾಗಿ ವಿಷಯದ ಬಗ್ಗೆ ಆದೇಶಗಳನ್ನು ಕೋರಿ ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಪ್ರಾಧಿಕಾರದ ಮುಂದಿನ ಸಭೆಯಲ್ಲಿ ತಾನು ಕೈಗೊಂಡ ಕ್ರಮದ ಬಗ್ಗೆ ಪ್ರಾಧಿಕಾರಕ್ಕೆ ತಿಳಿಸತಕ್ಕದ್ದು ಮತ್ತು ಆಯುಕ್ತನು ಕಳುಹಿಸಿಕೊಟ್ಟ ಅಂತಹ ವಿಷಯ ಬಗ್ಗೆ ರಾಜ್ಯ ಸರ್ಕಾರವು ಆದೇಶವನ್ನು ನೀಡುವವರೆಗೆ ಆಯುಕ್ತನು ಆ ನಿರ್ಣಯವನ್ನು ಜಾರಿಗೆ ತರಲು ಬದ್ಧನಾಗಿರತಕ್ಕದ್ದಲ್ಲ.

(5) ಪ್ರಾಧಿಕಾರವು ವಿನಿಮಯಗಳ ಮೂಲಕ ತನ್ನ ಸಭೆಗಳ ಕಾರ್ಯಕಲಾಪಗಳಿಗೆ ಸಂಬಂಧಪಟ್ಟಂತೆ ಈ ಅಧಿನಿಯಮದ ಉಪ–ಬಂಧಗಳಿಗೆ ಅಥವಾ ನಿಯಮಗಳಿಗೆ ಅಸಂಗತವಾಗದಂತಹ, ಕಾರ್ಯವಿಧಾನಗಳನ್ನು ಗೊತ್ತುಪಡಿಸಬಹುದು.

**15. ವ್ಯವಹರಣೆಗಳು ಸರಿಯಾದುದೆಂದು ಮತ್ತು ಊರ್ಜಿತವಾದುದೆಂದು ಪೂರ್ವಭಾವನೆ ಮಾಡುವುದು.–** ಅಧ್ಯಕ್ಷರಾಗಿ ಅಥವಾ ಸದಸ್ಯರಾಗಿ ಕಾರ್ಯನಿರ್ವಹಿಸುವ ಯಾವೊಬ್ಬ ವ್ಯಕ್ತಿಯ ಅನರ್ಹತೆ ಅಥವಾ ನೇಮಕಾತಿಯಲ್ಲಿನ ನ್ಯೂನತೆಯು ಪ್ರಾಧಿಕಾರದ ಯಾವುದೇ ಕೃತ್ಯ ಅಥವಾ ನಡುವಳಿಯು ಅನ್ಯಥಾ ಈ ಅಧಿನಿಯಮದ ಉಪಬಂಧಗಳಿಗೆ ಅನುಸಾರವಾಗಿದ್ದರೆ ಅಂತಹ ಕೃತ್ಯ ಅಥವಾ ವ್ಯವಹರಣೆಯನ್ನು ದೂಷಿತಗೊಳಿಸುತ್ತದೆಂದು ಭಾವಿಸತಕ್ಕದ್ದಲ್ಲ.

**16. ಸುತ್ತೋಲೆಯ ಮೂಲಕ ಪ್ರಾಧಿಕಾರದ ತೀರ್ಮಾನಗಳನ್ನು ಸೂಚಿಸುವುದು.–** (1) ಪ್ರಾಧಿಕಾರದ ಅಧ್ಯಕ್ಷರು ಯಾವುದೇ ಪ್ರಕರಣವನ್ನು ಪ್ರಾಧಿಕಾರದ ಒಂದು ಸಭೆಯಲ್ಲಿ ಚರ್ಚೆಗೆ ಬದಲಾಗಿ ಆ ಬಗ್ಗೆ ಅವರ ಅಭಿಪ್ರಾಯ ಕೋರಿ ನಿಯಮಿಸಲಾದ ನಮೂನೆಯಲ್ಲಿ ಒಂದು ಟಿಪ್ಪಣಿಯನ್ನು ಪ್ರಾಧಿಕಾರ ಸದಸ್ಯರ ನಡುವೆ ಪರಿಚಲನೆ ಮಾಡಿಸಲು ನಿರ್ದೇಶಿಸಬಹುದು ಹಾಗೆ ಪರಿಚಲನೆ ಮಾಡಲಾದ ಟಿಪ್ಪಣಿಯಲ್ಲಿರುವ ಪ್ರಸ್ತಾವವನ್ನು ಎಲ್ಲಾ ಸದಸ್ಯರು ಅವಿರೋಧವಾಗಿ ಒಪ್ಪಿಕೊಂಡಲ್ಲಿ ಅದನ್ನು ಪ್ರಾಧಿಕಾರದ ಸಮ್ಮತಿಸೂಚಕ ನಿರ್ಣಯವೆಂಬುದಾಗಿ ಭಾವಿಸತಕ್ಕದ್ದು ಮತ್ತು ತದನುಸಾರವಾಗಿ ಮುಂದಿನ ಕ್ರಮ ಕೈಗೊಳ್ಳತಕ್ಕದ್ದು. ಪ್ರಾಧಿಕಾರದ ತೀರ್ಮಾನಕ್ಕಾಗಿ ಪರಿಚಲನೆ ಮಾಡಲಾದ ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುದೇ ಭಿನ್ನಾಭಿಪ್ರಾಯ ವ್ಯಕ್ತವಾದರೆ ಆಯುಕ್ತರು ಆ ವಿಷಯವನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಅಭಿಪ್ರಾಯಕ್ಕಾಗಿ ಪರಿಚಲನೆ ಮಾಡಲಾದ ಸಂದರ್ಭಗಳಲ್ಲಿ ಯಾವೊಬ್ಬ ಸದಸ್ಯನು ಟಿಪ್ಪಣಿಯಲ್ಲಿ ನಿರ್ದಿಷ್ಟ ಪಡಿಸಿರುವ ದಿನಾಂಕದೊಳಗೆ ತಮ್ಮ ಅಭಿಪ್ರಾಯವನ್ನು ತಿಳಿಸಲು ತಪ್ಪಿದರೆ ಅಂತಹ ಸದಸ್ಯರು ಸುತ್ತೋಲೆ ಕಳುಹಿಸಲಾದ ಟಿಪ್ಪಣಿಯಲ್ಲಿ ಒಳಗೊಂಡ ಪ್ರಸ್ತಾವವನ್ನು ಒಪ್ಪಿಕೊಂಡಿದ್ದಾರೆಂದು ಭಾವಿಸತಕ್ಕದ್ದು.

(3) 14ನೇ ಪ್ರಕರಣದ ಉಪಬಂಧಗಳು ಯಥೋಚಿತ ವ್ಯತ್ಯಾಸಗಳೊಂದಿಗೆ ಈ ಪ್ರಕರಣದ ಪರಿಚಲನೆ ಮೂಲಕ ಕೈಕೊಂಡ ಪ್ರಾಧಿಕಾರದ ತೀರ್ಮಾನಗಳಿಗೆ ಅನ್ವಯವಾಗತಕ್ಕದ್ದು.

**17. ಕೆಲವು ತೀರ್ಮಾನಗಳನ್ನು ಕೈಗೊಳ್ಳಲು ಅಧ್ಯಕ್ಷನ ಅಧಿಕಾರ.–** ಯಾವೊಂದು ವಿಷಯವು 14ನೇ ಪ್ರಕರಣದ ಅಡಿಯಲ್ಲಿ ಪ್ರಾಧಿಕಾರದ ಸಭೆಯನ್ನು ಕರೆಯಲು ಅಗತ್ಯಪಡಿಸುವಷ್ಟು ಅಥವಾ 16ನೇ ಪ್ರಕರಣದ ಅಡಿಯಲ್ಲಿ ಸುತ್ತೋಲೆಯ ಮೂಲಕ ಪ್ರಾಧಿಕಾರವು ತೀರ್ಮಾನಿಸುವವರೆಗೂ ಕಾಯಲು ಸಾಧ್ಯವಾಗದಷ್ಟು ತುರ್ತು ಸ್ವರೂಪದ್ದಾಗಿದೆಯೆಂದು ಅಥವಾ ವಿಷಯವು ಗಹನವಾದುದಲ್ಲವೆಂದು ಅಧ್ಯಕ್ಷರು ಅಭಿಪ್ರಾಯಪಟ್ಟಲ್ಲಿ, ಅವರು

ತಾವು ಯುಕ್ತವೆಂದು ಭಾವಿಸುವಂತಹ ಆದೇಶಗಳನ್ನು ನೀಡಬಹುದು ಮತ್ತು ಅದನ್ನು ಪ್ರಾಧಿಕಾರದ ತೀರ್ಮಾನಗಳ ರೀತಿಯಲ್ಲಿಯೇ ಅನುಷ್ಠಾನಗೊಳಿಸತಕ್ಕದ್ದು:

ಪರಂತು, ಅಧ್ಯಕ್ಷರು ಈ ಪ್ರಕರಣದ ಅಡಿಯಲ್ಲಿ ಕೈಗೊಂಡ ಪ್ರತಿಯೊಂದು ತೀರ್ಮಾನಗಳನ್ನು ಪ್ರಾಧಿಕಾರದ ಮುಂದಿನ ಸಭೆಯಲ್ಲಿ ಮಂಡಿಸತಕ್ಕದ್ದು.

## ಅಧ್ಯಾಯ – III

## ಕಿತ್ತೂರಿನ ಅಭಿವೃದ್ಧಿ ಮತ್ತು ನಿರ್ವಹಣೆ

**18. ಕಿತ್ತೂರಿನಲ್ಲಿರುವ ಪರಂಪರೆಯ ತಾಣಗಳು.**– (1) ಯಾವುದೇ ಪದ್ಧತಿ, ಸಂಪ್ರದಾಯ, ರೂಢಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ಸೃಜಿಸಲಾದ ಮತ್ತು ಅಸ್ತಿತ್ವದಲ್ಲಿರುವ ಯಾವುದೇ ನ್ಯಾಸದ ನಿಬಂಧನೆಗಳಲ್ಲಿ ಏನೇ ಇದ್ದರೂ, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಕಿತ್ತೂರಿನ ಎಲ್ಲಾ ಅಥವಾ ಯಾವುವೇ ಪರಂಪರೆಯ ತಾಣಗಳ ನಿಯಂತ್ರಣ, ಒಡೆತನ, ಆಡಳಿತ ವ್ಯವಸ್ಥೆ ಮತ್ತು ಮೇಲ್ವಿಚಾರಣೆಯು, ಈಗಾಗಲೇ ರಾಜ್ಯ ಸರ್ಕಾರದಲ್ಲಿ ನಿಹಿತವಾಗಿರದಿದ್ದಲ್ಲಿ, ರಾಜ್ಯ ಸರ್ಕಾರವು, ಭೂ ಆರ್ಜನೆ ಅಧಿನಿಯಮ, 1894ರ (1984ರ ಕೇಂದ್ರ ಅಧಿನಿಯಮ ಸಂಖ್ಯೆ 1) ಅನುಸಾರ ಆರ್ಜಿಸತಕ್ಕದ್ದು ಮತ್ತು ತದನಂತರ ರಾಜ್ಯ ಸರ್ಕಾರವು ಅಧಿಸೂಚಿಸಿದ ದಿನಾಂಕದಿಂದ ಆ ಭೂಮಿಯು ಪ್ರಾಧಿಕಾರಕ್ಕೆ ವರ್ಗಾವಣೆಯಾಗತಕ್ಕದ್ದು:

ಪರಂತು, ಈ ಅಧಿನಿಯಮದ ಮೇರೆಗೆ ಆರ್ಜಿಸಿದ ಭೂಮಿಯು, ಭೂ ಆರ್ಜನೆ ಅಧಿನಿಯಮ, 1894ರ ಅಡಿಯಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಆರ್ಜಿಸಲಾದುದೆಂದು ಭಾವಿಸತಕ್ಕದ್ದು.

(2) ರಾಜ್ಯ ಸರ್ಕಾರವು, ತಾತ್ಕಾಲಿಕ ಉಪಬಂಧಗಳನ್ನು ಕಲ್ಪಿಸುವುದು ಅವಶ್ಯವೆಂದು ಭಾವಿಸಿದರೆ, ಅದು ಸಾಮಾನ್ಯ ಅಥವಾ ವಿಶೇಷ ಆದೇಶದ ಮೂಲಕ ಹಾಗೆ ಮಾಡಬಹುದು.

**19. ಅನುಸೂಚಿಯನ್ನು ತಿದ್ದುಪಡಿ ಮಾಡುವ ಅಧಿಕಾರ.**– ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ ನಿಯಮಿಸಬಹುದಾದಂಥ ಕಾರ್ಯವಿಧಾನವನ್ನು ಅನುಸರಿಸಿದ ತರುವಾಯ ಅನುಸೂಚಿಯಲ್ಲಿ ಯಾವುದೇ ನಮೂದನ್ನು ಸೇರಿಸಿ ಅಥವಾ ಮಾರ್ಪಡಿಸಿ ಅದನ್ನು ತಿದ್ದುಪಡಿ ಮಾಡಬಹುದು.

**20. ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು, ಅದರ ಅನುಮೋದನೆ ಹಾಗೂ ಅದನ್ನು ಕಾರ್ಯಗತಗೊಳಿಸುವುದು.**– (1) ಪ್ರಾಧಿಕಾರವು, ಅದರ ರಚನೆಯಾದ ಮೇಲೆ, ಆದಷ್ಟು ಬೇಗನೆ ಕಿತ್ತೂರು ಅಂತಾರಾಷ್ಟ್ರೀಯ ಯಾತ್ರಾ ಸ್ಥಳವನ್ನಾಗಿ ಸಾಂಸ್ಕೃತಿಕ ಹಾಗೂ ಪ್ರವಾಸಿ ಕೇಂದ್ರವನ್ನಾಗಿ ಮತ್ತು ರಾಣಿ ಚೆನ್ನಮ್ಮ ಮತ್ತು ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿದ ಆಕೆಯ ಸಮಕಾಲೀನರ ಸೂಕ್ತಿ–ಸಿದ್ಧಾಂತಗಳ ಚರ್ಚೆ ಹಾಗೂ ಪ್ರಚಾರದ ಕೇಂದ್ರವನ್ನಾಗಿ ಮಾಡಿ ಅದನ್ನು ಅಭಿವೃದ್ಧಿಗೊಳಿಸಲು ಯೋಜನೆಯನ್ನು ಸಿದ್ಧಪಡಿಸತಕ್ಕದ್ದು. ಅಭಿವೃದ್ಧಿ ಯೋಜನೆಯು ಈ ಮುಂದಿನವುಗಳನ್ನು ಒಳಗೊಂಡಿರಬಹುದು, ಎಂದರೆ:–

(ಎ) ಯಾವುದೇ ಪರಂಪರೆಯ ತಾಣ ಅಥವಾ ರಚನೆ ಅದರಲ್ಲೂ ಪ್ರಮುಖವಾಗಿ ಕೋಟೆಯ ಒಳಭಾಗದ ಸಂರಕ್ಷಣೆ ಮತ್ತು ಪುನರ್ ನಿರ್ಮಾಣ ಹಾಗೂ ಅದರ ನಿರ್ವಹಣೆ ಪುನರ್ ನಿರ್ಮಾಣಕ್ಕಾಗಿ ಕಾರ್ಯಕ್ರಮಗಳು;

(ಬಿ) ಪ್ರಾಧಿಕಾರದ ಅಭಿಪ್ರಾಯದಲ್ಲಿ ಅಭಿವೃದ್ಧಿ ಯೋಜನೆಯನ್ನು ಕಾರ್ಯಗತಗೊಳಿಸಲು ಅವಶ್ಯವಾದ ಭೂಮಿಯನ್ನು ಆರ್ಜನೆ ಅಥವಾ ಖರೀದಿಯ ಮೂಲಕ, ವಿನಿಯಮ ಅಥವಾ ಅನ್ಯಥಾ ಆರ್ಜಿಸುವುದಕ್ಕಾಗಿ ಪ್ರಸ್ತಾವಗಳು;

(ಸಿ) ಸಾರ್ವಜನಿಕ ಉದ್ಯಾನವನಗಳು, ತೋಟಗಾರಿಕೆ ಅಥವಾ ಮೃಗಾಲಯಗಳು, ಚಿಲುಮೆಗಳಿರುವ ವನಗಳು, ಕೃತಕ ಜಲಪಾತಗಳು, ಆಟದ ಉದ್ಯಾನವನಗಳು, ದೋಣಿ ವಿಹಾರದ ಅಥವಾ ನೀರಿನ ಇತರ ಕ್ರೀಡೆಯ ಸೌಲಭ್ಯವಿರುವ ಸರೋವರಗಳನ್ನು ಅಥವಾ ಪ್ರವಾಸಿಗಳಿಗೆ ಆಕರ್ಷಣೆಯನ್ನುಂಟುಮಾಡುವಂಥ ಇತರ ಕೇಂದ್ರಗಳನ್ನು ನಿರ್ಮಿಸುವುದು;

(ಡಿ) ಬೇರೆ ಬೇರೆ ವರ್ಗದ ಪ್ರವಾಸಿಗರಿಗಾಗಿ ಛತ್ರಗಳು, ವಸತಿ-ಗೃಹಗಳು, ಕಾಟೇಜುಗಳು, ಹೋಟೆಲುಗಳು, ರೆಸ್ಟೋರೆಂಟು ಮತ್ತು ಊಟದ ಮನೆಗಳನ್ನು ನಿರ್ಮಿಸುವುದು;

(ಇ) ಅವಶ್ಯಕ ಅಂಗಡಿಗಳ ಸಾಲುಗಳನ್ನು ಅಥವಾ ಅಂಗಡಿ-ಸಂಕೀರ್ಣಗಳನ್ನು ನಿರ್ಮಿಸುವುದು;

(ಎಫ್) 2ನೇ ಪ್ರಕರಣದಲ್ಲಿ ಪರಿಭಾಷಿಸಲಾದಂತೆ ಸೌಕರ್ಯಗಳನ್ನು ಕಲ್ಪಿಸುವುದು;

(ಜಿ) ಕಟ್ಟಡಗಳ ನಿರ್ಮಾಣ ಹಾಗೂ ಪುನರ್-ನಿರ್ಮಾಣವೂ ಸೇರಿದಂತೆ ಎಲ್ಲಾ ಅಥವಾ ಯಾವುದೇ ಭೂಮಿಯ ವಿನ್ಯಾಸ ಮತ್ತು ಮರು ವಿನ್ಯಾಸ;

(ಹೆಚ್) ಚರಂಡಿ ವ್ಯವಸ್ಥೆ, ವಿದ್ಯುಚ್ಛಕ್ತಿ ಮತ್ತು ನೀರು ಪೂರೈಕೆ ಮತ್ತು ನೈರ್ಮಲ್ಯ ವ್ಯವಸ್ಥೆಯ ಏರ್ಪಾಡು;

(ಐ) ಪ್ರಾಧಿಕಾರ, ಸಾಧಾರಣವಾಗಿ ತನ್ನ ಯೋಜನಾ ಕಾರ್ಯಕ್ಕೆ ಅನುವಾಗುವಂತೆ ಮತ್ತು ಮುಖ್ಯವಾಗಿ ಉತ್ತಮ ಚರಂಡಿ ವ್ಯವಸ್ಥೆಯನ್ನು ಒದಗಿಸಲು, ಯಾವುದೇ ಭೂಮಿಯನ್ನು ಎತ್ತರಿಸುವುದು ಸೂಕ್ತವೆಂದು ಭಾವಿಸಿದರೆ ಅಂಥ ಭೂಮಿಯನ್ನು ಎತ್ತರಿಸುವುದು;

(ಜೆ) ಕಿತ್ತೂರಿನಲ್ಲಿರುವ ಪ್ರದೇಶದಲ್ಲಿ ಅಥವಾ ಅದಕ್ಕೆ ಲಗತ್ತಾಗಿರುವ ಪ್ರದೇಶದಲ್ಲಿ ಉತ್ತಮ ಗಾಳಿ-ಬೆಳಕಿನ ವ್ಯವಸ್ಥೆಗಾಗಿ ಖಾಲಿ ಜಾಗಗಳನ್ನು ಬಿಡುವುದು;

(ಕೆ) ಜನರ ವಾಸಕ್ಕೆ ಯೋಗ್ಯವಲ್ಲದ ಹಾಗೂ ಅಭಿವೃದ್ಧಿ ಯೋಜನೆಗೆ ತಕ್ಕುದಲ್ಲದ ಎಲ್ಲ ಕಟ್ಟಡಗಳನ್ನು ಕೆಡಹುವುದು;

(ಎಲ್) ಅಡಚಣೆಯನ್ನುಂಟುಮಾಡುವ ಕಟ್ಟಡಗಳನ್ನು ಅಥವಾ ಆ ಕಟ್ಟಡಗಳ ಭಾಗಗಳನ್ನು ಕೆಡಹುವುದು;

(ಎಂ) ಕಟ್ಟಡಗಳ ನಿರ್ಮಾಣ ಮತ್ತು ಪುನರ್‌ನಿರ್ಮಾಣ, ಅವುಗಳ ನಿರ್ವಹಣೆ ಮತ್ತು ಸಂರಕ್ಷಣೆ;

(ಎನ್) ಅಭಿವೃದ್ಧಿ ಪ್ರದೇಶದೊಳಗೆ ಬರುವ ಎಲ್ಲಾ ಕೋಟೆಗಳು, ಮಠಗಳು, ಸಮಾಧಿಗಳು ಒಳಗೊಂಡಂತೆ ಕಿತ್ತೂರು ಕಾರ್ಯಕ್ಷೇತ್ರದಲ್ಲಿ ಅಥವಾ ಪ್ರಾಧಿಕಾರವು ತೀರ್ಮಾನಿಸಿದ ಸ್ಥಳದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವುದು;

(ಒ) ಸಂಪರ್ಕ ಮತ್ತು ಸಾಗಣೆ ಸೌಲಭ್ಯಗಳಿಗಾಗಿ ಏರ್ಪಾಟು;

(ಪಿ) ಅಭಿವೃದ್ಧಿ ಯೋಜನೆಯ ಭೌಗೋಳಿಕ ಪ್ರದೇಶದಲ್ಲಿ ಈಗಿರುವ ಮತೀಯ ಸಂಸ್ಥೆಗಳೊಂದಿಗೆ, ಅವು ಅಭಿವೃದ್ಧಿ ಯೋಜನೆಯ ಸ್ಕೀಮಿಗೆ ಸರಿಹೊಂದುವಷ್ಟರತನಕ ಅವುಗಳನ್ನು ಮುಂದುವರಿಸಲು ಅನುಮತಿಸಬಹುದಾದಂಥ ಹೊಂದಾಣಿಕೆಗಳು ಮತ್ತು ಕರಾರುಗಳನ್ನು ಮಾಡಿಕೊಳ್ಳುವುದು;

(ಕ್ಯೂ) ಕಿತ್ತೂರು ಕ್ಷೇತ್ರವನ್ನು ಸಾಂಸ್ಕೃತಿಕ ಕೇಂದ್ರವನ್ನಾಗಿ, ಯಾತ್ರಾ ಸ್ಥಳವನ್ನಾಗಿ ಮತ್ತು ಅಂತರರಾಷ್ಟ್ರೀಯ ಪ್ರವಾಸಿ ಕೇಂದ್ರವನ್ನಾಗಿ ಮಾಡುವ ಮತ್ತು ರಾಣಿಚೆನ್ನಮ್ಮ ಮಾತ್ರವಲ್ಲದೆ, ಆಕೆಯ ಸಮಕಾಲೀನರ ಸೂಕ್ತಿ ಸಿದ್ಧಾಂತಗಳ ಚರ್ಚೆ ಹಾಗೂ ಪ್ರಕಾರದ ಕೇಂದ್ರವನ್ನಾಗಿ ಮಾಡುವುದಕ್ಕಾಗಿ ಮತ್ತು ರಾಣಿ ಚೆನ್ನಮ್ಮ ಮತ್ತು ಆಕೆಯ ಸಮಕಾಲೀನರ ಜೀವನ, ಸಾಧನೆ ಮತ್ತು ತ್ಯಾಗಕ್ಕೆ ಸಂಬಂಧಪಟ್ಟ ಇತರ ಮಹತ್ವದ ಸ್ಥಳಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಮತ್ತು ಅಧ್ಯಯನಕ್ಕೆ ಸಂಬಂಧಿಸಿದಂತೆ ಶಿಕ್ಷಣ ಮತ್ತು ಸಂಶೋಧನಾ ಕೇಂದ್ರದ ಸ್ಥಾಪನೆಗಾಗಿ ಹಾಗೂ ಆ ವಿಷಯದ ಬಗ್ಗೆ ವಿಶೇಷ ಗ್ರಂಥಾಲಯದ ಸ್ಥಾಪನೆಗಾಗಿ, ಯುಕ್ತ ಹಾಗೂ ಆನುಷಂಗಿಕವೆಂದು ಪ್ರಾಧಿಕಾರವು ಅಭಿಪ್ರಾಯಪಡುವಂಥ ಇತರ ಯಾವುದೇ ವಿಷಯ;

(ಆರ್) ಪ್ರಾಧಿಕಾರದ ಪ್ರಾದೇಶಿಕ ಪರಿಮಿತಿಯೊಳಗಿನ ಐತಿಹಾಸಿಕ ಮತ್ತು ಪರಂಪರೆ ಯಾವುದೇ ಸ್ಥಳದಲ್ಲಿ ಮಣ್ಣಿನಲ್ಲಿ ಹೂತು ಹೋಗಿವೆ ಎಂದು ನಂಬಲಾದ ಪ್ರಾಚೀನ ಸ್ಮಾರಕಗಳು ಯಾವುದಾದರೂ ಇದ್ದರೆ ಅದನ್ನು ಭೂಮಿಯಿಂದ ತೆಗೆಯುವುದಕ್ಕಾಗಿ ಉತ್ಖನನ ಮತ್ತು ಪುರಾತತ್ವದ ಸ್ವರೂಪದ ಅನ್ವೇಷಣೆ:

ಪರಂತು, ಈ ಖಂಡದಲ್ಲಿ ಇರುವುದು ಯಾವುದೂ, ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಅಧಿನಿಯಮ, 1958ರ (1958ರ ಕೇಂದ್ರ ಅಧಿನಿಯಮ ಸಂಖ್ಯೆ: 24) ಉಪಬಂಧಗಳನ್ನು ಅಧ್ಯಾರೋಹಿಸುತ್ತದೆಂದು ಭಾವಿಸತಕ್ಕದ್ದಲ್ಲ.

(2) (1)ನೇ ಉಪ-ಪ್ರಕರಣದಡಿ ಸಿದ್ಧಪಡಿಸಲಾದ ಅಭಿವೃದ್ಧಿ ಯೋಜನೆಯನ್ನು ಆಯುಕ್ತರು ಅನುಮೋದನೆಗಾಗಿ ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು. ರಾಜ್ಯ ಸರ್ಕಾರವು, ಮಾರ್ಪಾಟುಗಳ ಸಹಿತವಾಗಿ ಅಥವಾ ಯಾವುವೇ ಮಾರ್ಪಾಟುಗಳಿಲ್ಲದೆ ಯೋಜನೆಯನ್ನು ಅನುಮೋದಿಸಬಹುದು.

(3) (2)ನೇ ಉಪ-ಪ್ರಕರಣದಡಿ ಅಭಿವೃದ್ಧಿ ಯೋಜನೆಯನ್ನು ಅನುಮೋದಿಸಿದ ತರುವಾಯ, ರಾಜ್ಯ ಸರ್ಕಾರವು ಪ್ರಾಧಿಕಾರದ ಶಿಫಾರಸುಗಳ ಮೇಲೆ ಕಾಲ ಕಾಲಕ್ಕೆ ತಾನು ಅವಶ್ಯಕವೆಂದು ಭಾವಿಸುವಂಥ ಮಾರ್ಪಾಟುಗಳನ್ನು ಯೋಜನೆಯಲ್ಲಿ ಮಾಡಬಹುದು.

(4) ಈ ಪ್ರಕರಣದಡಿ ರಾಜ್ಯ ಸರ್ಕಾರವು ಅನುಮೋದಿಸಿದ ಅಭಿವೃದ್ಧಿ ಯೋಜನೆಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ಕಾಮಗಾರಿಗಳನ್ನು ಕೈಗೊಳ್ಳುವ ಮತ್ತು ವೆಚ್ಚವನ್ನು ವಹಿಸುವ ಅಧಿಕಾರವನ್ನು ಪ್ರಾಧಿಕಾರವು ಹೊಂದಿರತಕ್ಕದ್ದು.

**21. ಕಿತ್ತೂರಿನ ನಿರ್ವಹಣೆ.**- ರಾಜ್ಯ ಸರ್ಕಾರವು ಪ್ರಾಧಿಕಾರದ ಶಿಫಾರಸುಗಳ ಮೇಲೆ ಅಥವಾ ಅನ್ಯಥಾ, ಕಿತ್ತೂರಿನ ನಿರ್ವಹಣೆಗಾಗಿ ಯಾವ ರೀತಿಯಲ್ಲಿ ಪರಂಪರೆಯ ತಾಣಗಳು ಸೇರಿದಂತೆ ಪ್ರಾಧಿಕಾರದ ಸ್ವತ್ತುಗಳನ್ನು ಬಳಸಿಕೊಳ್ಳಬಹುದು ಎಂಬ ರೀತಿಯನ್ನು, ಪಟ್ಟಣಕ್ಕೆ ಬರುವ ಭಕ್ತಾದಿಗಳು, ಯಾತ್ರಾರ್ಥಿಗಳು, ಪ್ರವಾಸಿಗಳು ಮತ್ತು ಇತರ ಸಂದರ್ಶಕರು ಬಳಸಿಕೊಳ್ಳಬಹುದಾದ ಹಲವಾರು ಸೌಲಭ್ಯಗಳಿಗಾಗಿ ಅವರಿಂದ ವಸೂಲು ಮಾಡಬಹುದಾದ ದರಗಳು, ಶುಲ್ಕಗಳು ಅಥವಾ ಇತರ ವೆಚ್ಚಗಳನ್ನು ಮತ್ತು ಪರಂಪರೆಯ ತಾಣಗಳ ಆವರಣಗಳಿಂದ ಯುಕ್ತವೆನಿಸಬಹುದಾದಂಥ ಇನ್ನಿತರ ವಿಷಯಗಳನ್ನು; ಭೂ ಕಂದಾಯದ ಬಾಕಿಯಂತೆ ಬಾಡಿಗೆ ಅಥವಾ ನಷ್ಟ ಪರಿಹಾರವನ್ನು ವಸೂಲು ಮಾಡುವ ಅಧಿಕಾರ ಇತ್ಯಾದಿ ಒಳಗೊಂಡಂತೆ ನಿಯಮಗಳ ಮೂಲಕ ಉಪಬಂಧ ಕಲ್ಪಿಸತಕ್ಕದ್ದು.

**22. ಪ್ರವೇಶಿಸುವ ಅಧಿಕಾರ.**– ಪ್ರಾಧಿಕಾರವು,–

(ಎ) ಯಾವುದೇ ಭೂಮಿ ಅಥವಾ ಕಟ್ಟಡದ ಯಾವುದೇ ತನಿಖೆ, ಪರಿಶೀಲನೆ ಮಾಪನ ಅಥವಾ ಸರ್ವೆ ಅಥವಾ ಅಳತೆ ಮಾಡುವ ಉದ್ದೇಶಕ್ಕಾಗಿ;

(ಬಿ) ಚರಂಡಿ ಮತ್ತು ಒಳಚರಂಡಿಗಳ ಮಾರ್ಗದಲ್ಲಿ ನಿರ್ಮಾಣವಾಗುತ್ತಿರುವ ಕಾಮಗಾರಿಯನ್ನು ಪರೀಕ್ಷಿಸುವ ಉದ್ದೇಶಕ್ಕಾಗಿ ಮತ್ತು ಆ ಮಾರ್ಗವನ್ನು ದೃಢಪಡಿಸಿಕೊಳ್ಳುವ ಉದ್ದೇಶಕ್ಕಾಗಿ;

(ಸಿ) ಒಳಮಣ್ಣನ್ನು ಅಗೆಯುವ ಅಥವಾ ಕೊರೆಯುವ ಉದ್ದೇಶಕ್ಕಾಗಿ;

(ಡಿ) ಸರಹದ್ದುಗಳನ್ನು ಹಾಕುವ ಮತ್ತು ಕಾಮಗಾರಿಯ ಉದ್ದೇಶಿತ ಗೆರೆಗಳನ್ನು ಹಾಕುವ ಉದ್ದೇಶಕ್ಕಾಗಿ;

(ಇ) ಗುರುತುಗಳನ್ನು ಹಾಕುವ ಮೂಲಕ ಮತ್ತು ಕಂದಕಗಳನ್ನು ತೋಡುವ ಮೂಲಕ ಅಂಥ ಮಟ್ಟಗಳನ್ನು, ಸರಹದ್ದುಗಳನ್ನು ಮತ್ತು ಗೆರೆಗಳನ್ನು ಮಾಡುವ ಉದ್ದೇಶಕ್ಕಾಗಿ;

(ಎಫ್) ಯಾವ ಯೋಜನೆ ಮತ್ತು ಷರತ್ತುಗಳಿಗೊಳಪಟ್ಟು ಅನುಮತಿಯನ್ನು ನೀಡಲಾಗಿತ್ತೋ ಆ ಯೋಜನೆ ಮತ್ತು ಷರತ್ತುಗಳನ್ನು ಉಲ್ಲಂಘಿಸಿ ಯಾವುದೇ ಭೂಮಿಯ ಅಭಿವೃದ್ಧಿ ಕಾರ್ಯ ಮಾಡಲಾಗಿದೆಯೇ ಅಥವಾ ಮಾಡಲಾಗುತ್ತಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವ ಉದ್ದೇಶಕ್ಕಾಗಿ; ಅಥವಾ

(ಜಿ) ಈ ಅಧಿನಿಯಮದ ಸಮರ್ಥ ಅನುಷ್ಠಾನಕ್ಕಾಗಿ ಯಾವುದೇ ಅಗತ್ಯ ಕಾರ್ಯವನ್ನು ನಿರ್ವಹಿಸುವ ಉದ್ದೇಶಕ್ಕಾಗಿ,

– ಯಾವುದೇ ಭೂಮಿ ಅಥವಾ ಕಟ್ಟಡವನ್ನು ಸಹಾಯಕರು ಅಥವಾ ಕೆಲಸಗಾರರೊಂದಿಗೆ ಅಥವಾ ತಾವೊಬ್ಬರೇ ಪ್ರವೇಶಿಸುವುದಕ್ಕೆ ಯಾವೊಬ್ಬ ವ್ಯಕ್ತಿಗೆ ಅಧಿಕಾರ ನೀಡಬಹುದು:

ಪರಂತು, ಸುರ್ಯೋದಯ ಮತ್ತು ಸೂರ್ಯಾಸ್ತದೊಳಗಿನ ಅವಧಿಯ ಹೊರತಾಗಿ ಮತ್ತು ಅಧಿಭೋಗದಾರನಿಗೆ ಅಥವಾ ಅಲ್ಲಿ ಯಾವೊಬ್ಬ ಅಧಿಭೋಗದಾರನು ಇರದಿದ್ದರೆ ಭೂಮಿ ಅಥವಾ ಕಟ್ಟಡದ ಮಾಲೀಕನಿಗೆ ಸೂಕ್ತ ನೋಟಿಸನ್ನು ಕೊಡದೇ ಹಾಗೆ ಪ್ರವೇಶಿಸತಕ್ಕದ್ದಲ್ಲ.

(i) ಸುರ್ಯೋದಯ ಹಾಗೂ ಸೂರ್ಯಾಸ್ತದ ನಡುವಣ ಅವಧಿಯನ್ನು ಹೊರತುಪಡಿಸಿ ಮತ್ತು ಅಧಿಭೋಗದಾರನಿಗೆ ಅಥವಾ ಅಧಿಭೋಗದಾರ ಇಲ್ಲದಿದ್ದರೆ ಆ ಭೂಮಿಯ ಅಥವಾ ಕಟ್ಟಡದ ಮಾಲೀಕನಿಗೆ ಯುಕ್ತ ನೋಟೀಸು ನೀಡದೆ ಅಂಥ ಪ್ರವೇಶವನ್ನು ಮಾಡತಕ್ಕದ್ದಲ್ಲ;

(ii) ಪ್ರತಿಯೊಂದು ಸಂದರ್ಭದಲ್ಲಿಯೂ ಅಂಥ ಭೂಮಿ ಅಥವಾ ಕಟ್ಟಡದಿಂದ ಹೊರಹೋಗುವುದಕ್ಕೆ, ಅಲ್ಲಿ ಮಹಿಳೆಯರು ಮತ್ತು ಮಕ್ಕಳೇನಾದರೂ ಇದ್ದರೆ, ಅವರಿಗೆ ಸಾಧ್ಯವಾಗುವಂತೆ ಯುಕ್ತ ಅವಕಾಶವನ್ನು ನೀಡತಕ್ಕದ್ದು.

(iii) ಆ ಭೂಮಿ ಅಥವಾ ಕಟ್ಟಡದ ಅಧಿಭೋಗದಾರನ ಸಾಮಾಜಿಕ ಮತ್ತು ಧಾರ್ಮಿಕ ಬಳಕೆಯ ಪ್ರವೇಶಕ್ಕೆ ಸಂಬಂಧಿಸಿದಂತೆ, ಯಾವ ಉದ್ದೇಶಕ್ಕಾಗಿ ಪ್ರವೇಶಿಸಲಾಗಿದೆಯೋ ಆ ಉದ್ದೇಶದ ಜರೂರು ಅವಶ್ಯಕತೆಗಳೇನಿದೆ ಎಂಬ ಬಗ್ಗೆ ಸಾಧ್ಯವಾದಷ್ಟು ಮಟ್ಟಿಗೆ ಸದಾ ಯುಕ್ತ ಗಮನ ನೀಡಿರತಕ್ಕದ್ದು.

**23. ಪ್ರಾಧಿಕಾರಕ್ಕೆ ರಾಜ್ಯ ಸರ್ಕಾರದ ಅಧಿಕಾರಗಳ ಪ್ರತ್ಯಾಯೋಜನೆ.–** ಕರ್ನಾಟಕ ಪ್ರಾಚೀನ ಐತಿಹಾಸಿಕ ಸ್ಮಾರಕ ಹಾಗೂ ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಅಧಿನಿಯಮ, 1961ರಲ್ಲಿ (1962ರ ಕರ್ನಾಟಕ ಅಧಿನಿಯಮ ಸಂಖ್ಯೆ 7) ಏನೇ ಇದ್ದರೂ, ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ತಾನು ಚಲಾಯಿಸಬಹುದಾದ ಯಾವುದೇ ಅಧಿಕಾರಗಳನ್ನು ಪ್ರಾಧಿಕಾರಕ್ಕೆ ಪ್ರತ್ಯಾಯೋಜಿಸಬಹುದು ಮತ್ತು ಇಂತಹ ಅಧಿಸೂಚನೆಯನ್ನು ಹೊರಡಿಸಿದ ತರುವಾಯ ಪ್ರಾಧಿಕಾರವು ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು ಮತ್ತು ಅಂತಹ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.

**24. ಬೀದಿ ಮುಂತಾದುವುಗಳ ನಿರ್ವಹಣೆ ಕರ್ತವ್ಯ.–** ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರಲ್ಲಿ (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14) ಏನೇ ಇದ್ದರೂ, ಈ ಮುಂದಿನ ವಿಷಯಗಳಿಗೆ ಸಂಬಂಧಿಸಿದಂತೆ ತಾನು ಕಾನೂನುಬದ್ಧವಾಗಿ ಬಳಸಬಹುದಾದ ಯಾವುದೇ ಸಾಧನ ಅಥವಾ ತೆಗೆದುಕೊಳ್ಳಬಹುದಾದ ಯಾವುದೇ ಕ್ರಮದ ಮೂಲಕ ಸಮಂಜಸವಾದ ಮತ್ತು ಸಮರ್ಪಕವಾದ ಉಪಬಂಧಗಳನ್ನು ರಚಿಸುವುದು ಪ್ರಾಧಿಕಾರದ ಕರ್ತವ್ಯವಾಗಿರತಕ್ಕದ್ದು, ಎಂದರೆ:–

(ಎ) ಕಿತ್ತೂರು ಪ್ರದೇಶದಲ್ಲಿನ ಬೀದಿಗಳ ನಿರ್ವಹಣೆ, ದುರಸ್ತಿ ಮಾಡಿಸುವುದು, ದೀಪ ವ್ಯವಸ್ಥೆ ಮತ್ತು ಸ್ವಚ್ಛಗೊಳಿಸುವುದು; ಮತ್ತು

(ಬಿ) ಕಿತ್ತೂರು ಪ್ರದೇಶದಲ್ಲಿನ ಬೀದಿಗಳ ಸಂಬಂಧದಲ್ಲಿ ಚರಂಡಿ ನೈರ್ಮಲ್ಯ ವ್ಯವಸ್ಥೆ ಮತ್ತು ನೀರು ಸರಬರಾಜು.

**25. ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974ನ್ನು ಪ್ರಾಧಿಕಾರದ ಆವರಣಗಳಿಗೆ ಅನ್ವಯಿಸುವುದು.–**(1) ರಾಜ್ಯ ಸರ್ಕಾರವು (2)ನೇ ಉಪಪ್ರಕರಣದ ಉಪಬಂಧಗಳಿಗೆ ಒಳಪಟ್ಟು ಅಧಿಸೂಚನೆಯ ಮೂಲಕ, ಅಂತಹ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದಂಥ ದಿನಾಂಕದಿಂದ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974ನ್ನು (1974ರ ಕರ್ನಾಟಕ ಅಧಿನಿಯಮ 32) ಸಾರ್ವಜನಿಕ ಆವರಣಗಳಿಗೆ ಸಂಬಂಧಿಸಿ ಅನ್ವಯಿಸುವಂತೆ ಪ್ರಾಧಿಕಾರಕ್ಕೆ ಸೇರಿದ, ಅದರಲ್ಲಿ ನಿಹಿತವಾದ ಅಥವಾ ಅದು ಗುತ್ತಿಗೆಗೆ ತೆಗೆದುಕೊಂಡ ಆವರಣಕ್ಕೆ ಅನ್ವಯಿಸತಕ್ಕದ್ದೆಂದು ಉಪಬಂಧ ಕಲ್ಪಿಸಬಹುದು.

(2) ಮೇಲ್ಕಂಡ ಅಧಿನಿಯಮದ (1)ನೇ ಉಪಪ್ರಕರಣದ ಅಡಿಯಲ್ಲಿ ಅಧಿಸೂಚನೆಯನ್ನು ಹೊರಡಿಸಿದ ತರುವಾಯ ಮತ್ತು ಅದರಡಿ ರಚಿಸಿದ ನಿಯಮಗಳು ಈ ಮುಂದಿನ ಮಾರ್ಪಾಡುಗಳೊಡನೆ ಪ್ರಾಧಿಕಾರಕ್ಕೆ ಸೇರಿದ ಆವರಣಗಳಿಗೆ ಅನ್ವಯಿಸತಕ್ಕದ್ದು, ಎಂದರೆ:–

(ಎ) ರಾಜ್ಯ ಸರ್ಕಾರವು ತಾನು ಸೂಕ್ತವೆಂದು ಭಾವಿಸುವಂತೆ ರಾಜ್ಯ ಸರ್ಕಾರದ ಅಥವಾ ಪ್ರಾಧಿಕಾರದ ಒಬ್ಬ ಅಧಿಕಾರಿಯನ್ನು ಮೇಲ್ಕಂಡ ಅಧಿನಿಯಮದ ಉದ್ದೇಶಗಳಿಗಾಗಿ ಸಕ್ಷಮ ಅಧಿಕಾರಿಯೆಂದು ನೇಮಿಸಬಹುದು.

(ಬಿ) ಆ ಅಧಿನಿಯಮದಲ್ಲಿ ಮತ್ತು ಆ ನಿಯಮಗಳಲ್ಲಿ "ಸಾರ್ವಜನಿಕ ಆವರಣಗಳಿಗೆ" ಮಾಡಿದ ಉಲ್ಲೇಖಗಳು ಪ್ರಾಧಿಕಾರದ ಆವರಣಗಳಿಗೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು ಮತ್ತು ಆ ಅಧಿನಿಯಮದ 6, 7, 8, 14, 15, 16 ಮತ್ತು 17ನೇ ಪ್ರಕರಣಗಳಲ್ಲಿ "ರಾಜ್ಯ ಸರ್ಕಾರಕ್ಕೆ" ಮಾಡಿದ ಉಲ್ಲೇಖಗಳನ್ನು ಪ್ರಾಧಿಕಾರಕ್ಕೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು.

**26. ಪ್ರವಾಸೋದ್ಯಮಕ್ಕೆ ಮತ್ತು ಯಾತ್ರೆ ಕೈಗೊಳ್ಳುವುದಕ್ಕೆ ಪ್ರಾಧಿಕಾರವು ಉತ್ತೇಜಿಸುವುದು.–** ಈ ಪಾರಂಪರಿಕ ತಾಣಗಳಿಗೆ ಸಾಕಷ್ಟು ಪ್ರಚಾರಗಳನ್ನು ನೀಡಲು ಪ್ರವಾಸೋದ್ಯಮ, ಸಾಂಸ್ಕೃತಿಕ, ಚಾರಿತ್ರಿಕ ಮತ್ತು ಯಾತ್ರಾ ಪ್ರಾಮುಖ್ಯತೆಯನ್ನು ಉತ್ತೇಜಿಸುವುದಕ್ಕಾಗಿ ಪ್ರಾಧಿಕಾರವು ಕಾರ್ಯಕ್ರಮಗಳನ್ನು ಮತ್ತು ಕಾರ್ಯಚಟುವಟಿಕೆಗಳನ್ನು ವ್ಯವಸ್ಥೆ ಮಾಡಬಹುದು. ಅಂಥ ಕಾರ್ಯಕ್ರಮಗಳು ಈ ಮುಂದಿನವುಗಳನ್ನು ಒಳಗೊಂಡಿರತಕ್ಕದ್ದು,–

(ಎ) ಕಿತ್ತೂರು ಉತ್ಸವ.

(ಬಿ) ಸಾಹಿತ್ಯೋತ್ಸವ.

(ಸಿ) ಕಲಾ ಪ್ರದರ್ಶನಗಳು ಮತ್ತು ಮಾರಾಟಗಳು.

(ಡಿ) ಸಮ್ಮೇಳನಗಳು, ವಿಚಾರಗೋಷ್ಠಿಗಳು, ಕಾರ್ಯಾಗಾರಗಳು.

(ಇ) ವಾರ್ಷಿಕ ಜಾತ್ರೆಗಳು ಮತ್ತು ವಿಶೇಷ ಸ್ವರೂಪದ ಹಬ್ಬಗಳು.

**27. ಅಧಿಕಾರಗಳ ಪ್ರತ್ಯಾಯೋಜನೆ.–** (1) 40ನೇ ಪ್ರಕರಣದ ಅಡಿಯಲ್ಲಿ ನಿಯಮಗಳನ್ನು ರಚಿಸುವ ಅಧಿಕಾರವನ್ನು ಹೊರತುಪಡಿಸಿ, ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ತನಗೆ ಪ್ರದತ್ತವಾದ ಯಾವುದೇ ಅಧಿಕಾರಗಳನ್ನು ಯಾವುದೇ ಪ್ರಾಧಿಕಾರಕ್ಕೆ ಪ್ರತ್ಯಾಯೋಜಿಸಬಹುದು.

(2) 41ನೇ ಪ್ರಕರಣದ ಅಡಿಯಲ್ಲಿ ವಿನಿಯಮಗಳನ್ನು ರಚಿಸುವ ಅಧಿಕಾರವನ್ನು ಹೊರತುಪಡಿಸಿ, ಪ್ರಾಧಿಕಾರವು, ವಿನಿಯಮಗಳ ಮೂಲಕ, ಈ ಅಧಿನಿಯಮದ ಮೂಲಕ ಅಥವಾ ಅದರ ಮೇರೆಗೆ ತನಗೆ ಪ್ರದತ್ತವಾದ ಯಾವುದೇ ಅಧಿಕಾರಗಳನ್ನು ಆಯುಕ್ತರಿಗೆ ಅಥವಾ ಪ್ರಾಧಿಕಾರದ ಇತರ ಅಧಿಕಾರಿಗಳಿಗೆ ಪ್ರತ್ಯಾಯೋಜಿಸಬಹುದು.

## ಅಧ್ಯಾಯ – IV

## ಹಣಕಾಸು ಮತ್ತು ಸ್ವತ್ತು

**28. ಪ್ರಾಧಿಕಾರದ ನಿಧಿ.–** (1) ಕಿತ್ತೂರು ಪ್ರಾಧಿಕಾರ ನಿಧಿಯೆಂದು ಕರೆಯಲಾಗುವ ಒಂದು ನಿಧಿಯು ಇರತಕ್ಕದ್ದು.

(2) ಸದರಿ ನಿಧಿಗೆ,–

(i) ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಯಾವುದೇ ಸ್ಥಳೀಯ ಪ್ರಾಧಿಕಾರ ಅಥವಾ ನಿಗಮಿತವಾದ ಇಲ್ಲವೇ ನಿಗಮಿತವಲ್ಲದ ಯಾವುದೇ ನಿಕಾಯ ಅಥವಾ ಯಾವೊಬ್ಬ ವ್ಯಕ್ತಿಯು ನೀಡಿದ ಎಲ್ಲ ಅನುದಾನಗಳು, ಧನ ಸಹಾಯ, ದೇಣಿಗೆಗಳು ಮತ್ತು ದಾನಗಳನ್ನು;

(ii) ಪ್ರಾಧಿಕಾರವು ಸಾಲ ಪಡೆದ ಮೊಬಲಗನ್ನು ; ಮತ್ತು

(iii) ಯಾವುದೇ ಮೂಲದಿಂದಾಗಲಿ, ಪ್ರಾಧಿಕಾರವು ಅಥವಾ ಪ್ರಾಧಿಕಾರದ ಪರವಾಗಿ ಪಡೆದುಕೊಂಡ ಇತರ ಎಲ್ಲಾ ಮೊತ್ತಗಳನ್ನು,

– ಜಮೆ ಮಾಡತಕ್ಕದ್ದು;

(3) ರಾಜ್ಯ ಸರ್ಕಾರವು ಅನ್ಯಥಾ ನಿರ್ದೇಶಿಸಿದ ಹೊರತು ನಿಧಿಗೆ ಜಮೆ ಮಾಡಲಾದ ಎಲ್ಲ ಹಣವನ್ನು ಯಾವುದೇ ಅನುಸೂಚಿತ ಬ್ಯಾಂಕಿನಲ್ಲಿ ಅಥವಾ ರಾಜ್ಯ ಸರ್ಕಾರದ ಖಜಾನೆಯಲ್ಲಿ ಇರಿಸತಕ್ಕದ್ದು.

(4) ಪ್ರಾಧಿಕಾರದ ಆಯುಕ್ತರಿಗೆ ಮತ್ತು ಇತರ ಅಧಿಕಾರಿಗಳಿಗೆ ಮತ್ತು ನೌಕರರಿಗೆ ಸಂದಾಯ ಮಾಡಬೇಕಾದ ವೇತನಗಳು, ಭತ್ಯೆಗಳು ಮತ್ತು ನಿವೃತ್ತಿ ವೇತನವೇನಾದರೂ ಇದ್ದಲ್ಲಿ ಅದನ್ನೂ ಒಳಗೊಂಡಂತೆ ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳನ್ನು ಪ್ರಾಧಿಕಾರದ ನಿಧಿಯಿಂದ ಭರಿಸತಕ್ಕದ್ದು.

**29. ನಿಧಿಯ ಬಳಕೆ.–** ನಿಧಿಯನ್ನು ಮತ್ತು ಪ್ರಾಧಿಕಾರವು ಹೊಂದಿರುವ ಅಥವಾ ಅದರಲ್ಲಿ ನಿಹಿತವಾಗಿರುವ ಎಲ್ಲ ಸ್ವತ್ತನ್ನು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ ಬಳಸಿಕೊಳ್ಳತಕ್ಕದ್ದು.

**30. ಸರ್ಕಾರದಿಂದ ಅನುದಾನ.–** ರಾಜ್ಯ ಸರ್ಕಾರವು ಪ್ರತಿ ವರ್ಷವೂ ಪ್ರಾಧಿಕಾರಕ್ಕೆ ಪ್ರಾಧಿಕಾರವು ತನ್ನದೇ ಸಂಪನ್ಮೂಲಗಳಿಂದ ಸ್ವಯಂ ನಿರ್ವಹಣೆ ಮಾಡಿಕೊಳ್ಳುವ ಹಂತವನ್ನು ತಲುಪುವವರೆಗೆ ಅದರ ಆಡಳಿತಾತ್ಮಕ ವೆಚ್ಚಗಳಿಗೆ ಸಮನಾದ ಮೊತ್ತವನ್ನು ಅನುದಾನದ ರೂಪದಲ್ಲಿ ನೀಡತಕ್ಕದ್ದು ಮತ್ತು ಕಾಲಕಾಲಕ್ಕೆ ಪರಂಪರೆಯ ಸ್ಥಳಗಳ ಅಭಿವೃದ್ಧಿಗೆ ಸಹಾಯಾನುದಾನ ನೀಡತಕ್ಕದ್ದು.

**31. ಪ್ರಾಧಿಕಾರದ ಆಯವ್ಯಯ.–** (1) ಪ್ರಾಧಿಕಾರವು ಪ್ರತಿ ವರ್ಷವೂ ನಿಯಮಿಸಬಹುದಾದಂತಹ ದಿನಾಂಕಕ್ಕೆ ಮೊದಲು ಮತ್ತು ಅಂತಹ ನಮೂನೆಯಲ್ಲಿ ಮುಂಬರುವ ಏಪ್ರಿಲ್ ಒಂದನೆಯ ದಿನಾಂಕದಂದು ಪ್ರಾರಂಭವಾಗುವ ವರ್ಷಕ್ಕಾಗಿ ತನ್ನ ಆದಾಯ ಮತ್ತು ವೆಚ್ಚದ ಆಯವ್ಯಯ ಅಂದಾಜನ್ನು ಸಿದ್ಧಪಡಿಸತಕ್ಕದ್ದು ಮತ್ತು ಸರ್ಕಾರಕ್ಕೆ ಮಂಜೂರಾತಿಗಾಗಿ ಕಳುಹಿಸತಕ್ಕದ್ದು. ಪ್ರಾಧಿಕಾರವು ಅವಶ್ಯವಾದರೆ, ಯಾವುದೇ ಹಣಕಾಸು ವರ್ಷದ ಅವಧಿಯಲ್ಲಿ ಪೂರಕ ಆಯವ್ಯಯ ಅಂದಾಜುಗಳನ್ನು ಸಹ ಸಿದ್ದಪಡಿಸಬಹುದು.

(2) ರಾಜ್ಯ ಸರ್ಕಾರವು ಈ ಆಯವ್ಯಯ ಅಂದಾಜುಗಳನ್ನು ಮತ್ತು ಪೂರಕ ಬಜೆಟ್ ಅಂದಾಜುಗಳನ್ನು ಅವುಗಳಲ್ಲಿ ಮಾರ್ಪಾಡುಗಳನ್ನು ಮಾಡಿ ಅಥವಾ ಮಾಡದೇ ಅನುಮೋದಿಸಬಹುದು.

(3) ಅತ್ಯಂತ ತುರ್ತು ಸಂದರ್ಭದಲ್ಲಿ ಆಯುಕ್ತರು, ಒಂದು ಹಣಕಾಸು ವರ್ಷದಲ್ಲಿ ಐದು ಲಕ್ಷ ರೂಪಾಯಿಗಳಿಗೆ ಮೀರದಂತೆ ವೆಚ್ಚವನ್ನು ಅಂತಹ ವೆಚ್ಚವನ್ನು (2)ನೇ ಉಪಪ್ರಕರಣದಡಿ ರಾಜ್ಯ ಸರ್ಕಾರವು ಅನುಮೋದಿಸಿದ ವಾರ್ಷಿಕ ಅಥವಾ ಪೂರಕ ಆಯವ್ಯಯ ಅಂದಾಜಿನಲ್ಲಿ ಸೇರಿಸಿಲ್ಲದಿದ್ದಾಗ್ಯೂ ಮಾಡಲು ಸಕ್ಷಮರಾಗಿರತಕ್ಕದ್ದು.

(4)ಆಯುಕ್ತರು ಒಂದು ಬಾರಿಗೆ ಒಂದು ಲಕ್ಷ ರೂಪಾಯಿಗಳ ಗರಿಷ್ಠ ಮಿತಿಗೆ ಒಳಪಟ್ಟು ವೆಚ್ಚದ ಒಂದು ಘಟಕದಿಂದ ಇನ್ನೊಂದು ಘಟಕ್ಕೆ ನಿಧಿಗಳ ಪುನರ್ ವಿನಿಯೋಗ ಮಾಡುವ ಅಧಿಕಾರವನ್ನೂ ಹೊಂದಿರತಕ್ಕದ್ದು.

**32. ಲೆಕ್ಕ ಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ಆಯುಕ್ತನು, ನಿಯಮಿಸಬಹುದಾದಂಥ ಲೆಕ್ಕಪತ್ರಗಳ ಪುಸ್ತಕಗಳನ್ನು ಮತ್ತು ಇತರ ರಿಜಿಸ್ಟರುಗಳನ್ನು ನಿರ್ವಹಿಸುವಂತೆ ಮಾಡತಕ್ಕದ್ದು ಮತ್ತು ನಿಯಮಿಸಲಾದ ವಿಧಾನದಲ್ಲಿ ವಾರ್ಷಿಕ ಲೆಕ್ಕಪತ್ರಗಳ ಹೇಳಿಕೆಯನ್ನು ತಯಾರಿಸತಕ್ಕದ್ದು.

(2) ಪ್ರಾಧಿಕಾರದ ಹಣಕಾಸು ವರ್ಷವು ಪ್ರತಿ ಕ್ಯಾಲೆಂಡರ್ ವರ್ಷದ ಏಪ್ರಿಲ್ ಒಂದನೆಯ ದಿನಾಂಕದಂದು ಪ್ರಾರಂಭವಾಗತಕ್ಕದ್ದು ಮತ್ತು ಮುಂಬರುವ ಕ್ಯಾಲೆಂಡರ್ ವರ್ಷದ ಮಾರ್ಚಿ 31ನೇ ದಿನದಂದು ಕೊನೆಗೊಳ್ಳತಕ್ಕದ್ದು.

(3) ಪ್ರಾಧಿಕಾರದ ಲೆಕ್ಕಪತ್ರಗಳನ್ನು ರಾಜ್ಯ ಲೆಕ್ಕಪತ್ರಗಳ ಇಲಾಖೆಯ ನಿಯಂತ್ರಣಾಧಿಕಾರಿಯು ವಾರ್ಷಿಕವಾಗಿ ಲೆಕ್ಕಪರಿಶೋಧನೆ ನಡೆಸತಕ್ಕದ್ದು. ಪ್ರಾಧಿಕಾರ ಅಥವಾ ರಾಜ್ಯ ಸರ್ಕಾರವು ಸಮವರ್ತಿ ಮತ್ತು ವಿಶೇಷ ಲೆಕ್ಕಪರಿಶೋಧನೆಗಾಗಿಯೂ ಸಹ ಆದೇಶಿಸಬಹುದು.

(4) ಲೆಕ್ಕಪರಿಶೋಧಕನು, ಲೆಕ್ಕಪರಿಶೋಧನೆಯ ಉದ್ದೇಶಗಳಿಗಾಗಿ, ಪ್ರಾಧಿಕಾರದ ಎಲ್ಲ ಲೆಕ್ಕಪತ್ರಗಳನ್ನು ಮತ್ತು ಇತರ ದಾಖಲೆಗಳನ್ನು ನೋಡುವ ಅವಕಾಶವನ್ನು ಹೊಂದಿರತಕ್ಕದ್ದು.

(5) ಪ್ರಾಧಿಕಾರವು, ಲೆಕ್ಕಪತ್ರಗಳ ವಾರ್ಷಿಕ ಹೇಳಿಕೆಯನ್ನು ಮತ್ತು ಲೆಕ್ಕಪರಿಶೋಧಕನ ವರದಿಯನ್ನು ಸ್ವೀಕರಿಸಿದ ತರುವಾಯ, ಸಾಧ್ಯವಾಗಬಹುದಾದಷ್ಟು ಬೇಗನೆ, ತನ್ನ ಸಭೆಯಲ್ಲಿ ಅದನ್ನು ಪರಿಶೀಲಿಸತಕ್ಕದ್ದು ಮತ್ತು ವಾರ್ಷಿಕ ಲೆಕ್ಕಪತ್ರಗಳ ಹೇಳಿಕೆಯ ಹಾಗೂ ಲೆಕ್ಕಪರಿಶೋಧಕನ ವರದಿಯ ಪ್ರತಿಯನ್ನು, ಲೆಕ್ಕಪರಿಶೋಧಕನು ಮಾಡಿದ ಟೀಕೆಗಳೇನಾದರೂ ಇದ್ದಲ್ಲಿ, ಅದಕ್ಕೆ ನೀಡಿದ ತನ್ನ ವಿವರಣೆಯನ್ನು ಮತ್ತು ಲೆಕ್ಕಪರಿಶೋಧಕನು ಸೂಚಿಸಿದ ಅಕ್ರಮತೆಗಳು ಅಥವಾ ಲೋಪದೋಷಗಳೇನಾದರೂ ಇದ್ದಲ್ಲಿ, ಅವುಗಳ ಪರಿಹಾರೋಪಾಯಕ್ಕಾಗಿ ಪ್ರಾಧಿಕಾರವು ಕೈಗೊಂಡ ಕ್ರಮದ ವಿವರಣೆಯೊಂದಿಗೆ ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು.

(6) ರಾಜ್ಯ ಸರ್ಕಾರವು, ಲೆಕ್ಕ ಪರಿಶೋಧಕನ ವರದಿಯನ್ನು ಮತ್ತು (5) ನೇ ಉಪ-ಪ್ರಕರಣದ ಅಡಿಯಲ್ಲಿ ತನಗೆ ಸಲ್ಲಿಸಲಾದ ಇತರ ದಸ್ತಾವೇಜುಗಳನ್ನು ಪರಿಶೀಲಿಸಿದ ನಂತರ, ಪ್ರಾಧಿಕಾರಕ್ಕೆ ಅದು ಸೂಕ್ತವೆಂದು ಭಾವಿಸುವ ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ಪ್ರಾಧಿಕಾರವು ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

**33. ವರದಿಗಳು.**- (1) ಪ್ರಾಧಿಕಾರವು, ಪ್ರತಿಯೊಂದು ಹಣಕಾಸು ವರ್ಷಕ್ಕಾಗಿ, ತನ್ನ ಕಾರ್ಯನಿರ್ವಹಣೆ ಬಗ್ಗೆ ವಾರ್ಷಿಕ ವರದಿಯೊಂದನ್ನು ತಯಾರಿಸತಕ್ಕದ್ದು ಮತ್ತು ಇತರ ವರದಿಗಳೊಂದಿಗೆ ಅದನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

(2) ಪ್ರಾಧಿಕಾರವು ನಿಯಮಿಸಬಹುದಾದ ಅಂಥ ದಿನಾಂಕಕ್ಕಿಂತ ಮೊದಲು, ಅಂಥ ನಮೂನೆಯಲ್ಲಿ ಮತ್ತು ಅಂಥ ಅವಧಿಯ ಅಂತರದಲ್ಲಿ, ವರದಿಗಳನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

## ಅಧ್ಯಾಯ – V

### ಸಂಕೀರ್ಣ

**34. ಪ್ರಾಧಿಕಾರವು ತನ್ನ ಅಧಿಕಾರ ವ್ಯಾಪ್ತಿಯೊಳಗಿನ ಯಾವುದೇ ಜಮೀನನ್ನು ಮಾರಾಟ ಮಾಡಕೂಡದು.**- ಪ್ರಾಧಿಕಾರವು, ಸರ್ಕಾರದ ಪೂರ್ವಾನುಮೋದನೆ ಪಡೆಯದೆ, ಯಾವುದೇ ಉದ್ದೇಶಕ್ಕಾಗಿ ಮತ್ತು ಯಾವೊಬ್ಬ ವ್ಯಕ್ತಿಗೆ ಯಾವುದೇ ಜಮೀನನ್ನು ಮಾರಾಟ ಮಾಡತಕ್ಕದ್ದಲ್ಲ.

**35. ಕೆಲವು ವ್ಯಕ್ತಿಗಳು ಲೋಕನೌಕರರಾಗಿರತಕ್ಕದ್ದು.**- ಪ್ರಾಧಿಕಾರದ ಎಲ್ಲ ಸದಸ್ಯರು, ಅಧಿಕಾರಿಗಳು ಮತ್ತು ನೌಕರರನ್ನು, ಅವರು ಈ ಅಧಿನಿಯಮದ ಯಾವುವೇ ಉಪಬಂಧಗಳ ಅನುಸರಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವಾಗ ಅಥವಾ ಕಾರ್ಯ ನಿರ್ವಹಿಸುತ್ತಿರುವರೆಂದು ತಾತ್ಪರ್ಯವಾದಾಗ ಅವರನ್ನು ಭಾರತ ದಂಡ ಸಂಹಿತೆಯ 21ನೇ ಪ್ರಕರಣದ ಅರ್ಥವ್ಯಾಪ್ತಿಯೊಳಗೆ ಲೋಕನೌಕರರು ಎಂಬುದಾಗಿ ಭಾವಿಸತಕ್ಕದ್ದು.

**36. ಈ ಅಧಿನಿಯಮದ ಅಡಿ ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ.**- ಸದ್ಭಾವನೆಯಿಂದ ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿದ ಯಾವುದೇ ಕೃತ್ಯಕ್ಕಾಗಿ, ಈ ಅಧಿನಿಯಮದ ಅಡಿಯಲ್ಲಿ ಯಾವೊಬ್ಬ ವ್ಯಕ್ತಿಯ ವಿರುದ್ಧ ಯಾವುದೇ ದಾವೆ, ಪ್ರಾಸಿಕ್ಯೂಷನ್ ಅಥವಾ ಇತರೆ ಕಾನೂನು ವ್ಯವಹರಣೆಗಳನ್ನು ಹೂಡತಕ್ಕದ್ದಲ್ಲ.

**37. ರಾಜ್ಯ ಸರ್ಕಾರದ ನಿಯಂತ್ರಣ.–** (1) ಪ್ರಾಧಿಕಾರದ ಎಲ್ಲ ಕಾರ್ಯಚಟುವಟಿಕೆಗಳು ಮತ್ತು ವ್ಯವಹಾರಗಳ ಮೇಲೆ ರಾಜ್ಯ ಸರ್ಕಾರವು ಸಾಮಾನ್ಯ ಆಡಳಿತಾತ್ಮಕ ನಿಯಂತ್ರಣ ಮತ್ತು ಪರಿವೀಕ್ಷಣೆ ಹೊಂದಿರತಕ್ಕದ್ದು.

(2) ರಾಜ್ಯ ಸರ್ಕಾರವು, ಪ್ರಾಧಿಕಾರವು, ಆಯುಕ್ತರ ಅಥವಾ ಪ್ರಾಧಿಕಾರದ ಅಧೀನದ ಯಾವೊಬ್ಬ ಅಧಿಕಾರಿಯ ಯಾವುವೇ ವ್ಯವಹರಣೆಗಳ ದಾಖಲೆಗಳನ್ನು, ಅಂಥ ವ್ಯವಹರಣೆಗಳ ಯಥಾರ್ಥತೆ, ಕಾನೂನು ಬದ್ಧತೆ ಅಥವಾ ಔಚಿತ್ಯಗಳ ಬಗ್ಗೆ ತಾನು ಸಮಾಧಾನಪಡುವ ಉದ್ದೇಶಕ್ಕಾಗಿ ತರಿಸಿಕೊಳ್ಳಬಹುದು ಮತ್ತು ಅವುಗಳ ಬಗ್ಗೆ ತಾನು ಸೂಕ್ತವೆಂದು ಭಾವಿಸಿದಂಥ ಆದೇಶಗಳನ್ನು ಹೊರಡಿಸಬಹುದು.

**38. ನಿರ್ದೇಶನಗಳನ್ನು ನೀಡುವುದಕ್ಕೆ ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯ ಸರ್ಕಾರವು ಈ ಅಧಿನಿಯಮದ ಉದ್ದೇಶಗಳನ್ನು ಆಚರಣೆಗೆ ತರುವುದಕ್ಕಾಗಿ ತಾನು ಅವಶ್ಯಕ ಮತ್ತು ಸಮಯೋಚಿತವೆಂದು ಅಭಿಪ್ರಾಯ ಪಡುವಂಥ ನಿರ್ದೇಶನಗಳನ್ನು ಪ್ರಾಧಿಕಾರಕ್ಕೆ ಕೊಡಬಹುದು ಮತ್ತು ಅಂಥ ನಿರ್ದೇಶನಗಳನ್ನು ಪಾಲಿಸುವುದು ಪ್ರಾಧಿಕಾರದ ಕರ್ತವ್ಯವಾಗಿರತಕ್ಕದ್ದು.

**39. ತೊಂದರೆಗಳ ನಿವಾರಣೆ.–** ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೆ ತರುವಲ್ಲಿ, ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು ಆ ತೊಂದರೆಯ ನಿವಾರಣೆಗಾಗಿ, ತಾನು ಅವಶ್ಯಕ ಮತ್ತು ಸಮಯೋಚಿತವೆಂದು ಅಬಿಪ್ರಾಯಪಡುವಂಥ ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಂತೆ ಉಪಬಂಧಗಳನ್ನು ಅಧಿಸೂಚನೆಯ ಮೂಲಕ ಮಾಡಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಎರಡು ವರ್ಷಗಳು ಮುಕ್ತಾಯವಾದ ಮೇಲೆ ಅಂಥ ಅಧಿಸೂಚನೆಯನ್ನು ಹೊರಡಿಸತಕ್ಕದ್ದಲ್ಲ.

**40. ನಿಯಮಗಳ ರಚನಾಧಿಕಾರ.–** (1) ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಮೇರೆಗೆ ರಚಿಸಲಾದ ಪ್ರತಿಯೊಂದು ನಿಯಮ ಅಥವಾ ಅಧಿಸೂಚನೆಯನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚಿನ ನಿರಂತರ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನಗಳ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನದ ಮುಕ್ತಾಯಕ್ಕೆ ಮುಂಚೆ ಆ ನಿಯಮ ಅಥವಾ ಅಧಿಸೂಚನೆಯ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಎರಡೂ ಸದನಗಳೂ ಒಪ್ಪಿದರೆ ಅಥವಾ ಆ ನಿಯಮ ಅಥವಾ ಅಧಿಸೂಚನೆಯ ಮಾಡಕೂಡದೆಂದು ಎರಡೂ ಸದನಗಳೂ ಒಪ್ಪಿದರೆ ಆ ನಿಯಮ ಅಥವಾ ಅಧಿಸೂಚನೆಯ ಆ ಮಾರ್ಪಾಟನ್ನು ಅಥವಾ ರದ್ದತಿಯನ್ನು ಅಧಿಸೂಚಿಸಿದ ದಿನಾಂಕದಿಂದ ಸಂದರ್ಭಾನುಸಾರ ಅಂಥ ಮಾರ್ಪಾಟಾದ ರೂಪದಲ್ಲಿ ಮಾತ್ರ

ಪರಿಣಾಮಕಾರಿಯಾಗಿರತಕ್ಕದ್ದು ಅಥವಾ ಯಾವುದೇ ಪರಿಣಾಮ ಹೊಂದಿರತಕ್ಕದ್ದಲ್ಲ; ಆದಾಗ್ಯೂ ಅಂಥ ಯಾವುದೇ ಮಾರ್ಪಾಟು ಅಥವಾ ರದ್ದತಿಯು ಆ ನಿಯಮ ಅಥವಾ ಅಧಿಸೂಚನೆಯ ಮೇರೆಗೆ ಹಿಂದೆ ಮಾಡಿದ ಯಾವುದೇ ಕೃತ್ಯದ ಮಾನ್ಯತೆಗೆ ಬಾಧಕವಾಗತಕ್ಕದ್ದಲ್ಲ.

**41. ವಿನಿಯಮಗಳ ರಚನಾಧಿಕಾರ.**- ಪ್ರಾಧಿಕಾರವು, ಈ ಅಧಿನಿಯಮದ ಉಪಬಂಧಗಳಿಗೆ ಮತ್ತು 40ನೇ ಪ್ರಕರಣದ ಮೇರೆಗೆ ಮಾಡಲಾದ ನಿಯಮಗಳಿಗೆ ಒಳಪಟ್ಟು ಮತ್ತು ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿಯೊಂದಿಗೆ ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕೆ ಅಧಿಸೂಚನೆಯ ಮೂಲಕ ವಿನಿಯಮಗಳನ್ನು ರಚಿಸಬಹುದು.

**ಅನುಸೂಚಿ**

[2ನೇ ಪ್ರಕರಣದ (ಜಿ) ಖಂಡವನ್ನು ನೋಡಿ]

ಕಿತ್ತೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳ ಪರಂಪರೆಯ ತಾಣಗಳು ಮತ್ತು ಸ್ಮಾರಕಗಳು

| ಕ್ರಮ ಸಂಖ್ಯೆ | ಸ್ಥಳ |
|---|---|
| 1. | ಕೋಟೆ |
| 2. | ಗಡ್ಡದ ಮರಡಿ |
| 3. | ಕಲ್ಮಟ (ಯೋಧರ ಸಮಾಧಿ) |
| 4. | ಚೌಕಿಮಠ (ಸಮಾಧಿಗಳು) |
| 5. | ಬೈಲಹೊಂಗಲದಲ್ಲಿನ ರಾಣಿ ಚೆನ್ನಮ್ಮ ಸಮಾಧಿ |
| 6. | ಕಾಕತಿ ಕೋಟೆ |
| 7. | ಅಮ್ಮತ್ತೂರು ಬಾಳಪ್ಪ ಪ್ರತಿಮೆ |
| 8. | ಕಿತ್ತೂರು ಐತಿಹಾಸಿಕ ಗ್ರಂಥಾಲಯ |
| 9. | ಪುರಾತತ್ವ ಮತ್ತು ವಸ್ತು ಸಂಗ್ರಹಾಲಯಗಳು |
| 10. | ಹುಬ್ಬಳ್ಳಿ ಮೂರು ಸಾವಿರ ಮಠದ ಸ್ಮಾರಕಗಳ ರಕ್ಷಣೆ |
| 11. | ತೋಟಗಾರಿಕೆ ಇಲಾಖೆಯ ಅಧೀನದಲ್ಲಿ ಕೋಟೆಯೊಳಗಿನ 7 ಎಕರೆ ಭೂಮಿಯನ್ನು ಉದ್ಯಾನವನವನ್ನಾಗಿ ಅಭಿವೃದ್ಧಿಪಡಿಸುವುದು |
| 12. | ಕಿತ್ತೂರಿನ ಪಾರಂಪರಿಕ ವಸ್ತುಗಳು ಮತ್ತು ಸ್ಮಾರಕಗಳ ಸಂರಕ್ಷಣೆ |
| 13. | ಸಂಪಗಾಂವ್ ಜೈಲಿನ ಸಂರಕ್ಷಣೆ |
| 14. | ಕೋಟೆಯೊಳಗಿನ ಗ್ರಾಮದೇವತೆ ಮತ್ತು ಮಾರುತಿ ದೇವಸ್ಥಾನಗಳು |
| 15. | ಪ್ರವಾಸೋದ್ಯಮ ಇಲಾಖೆಯ ಮುಖಾಂತರ ಪರಂಪರೆಯ ಪ್ರಸಾರ |
| 16. | ಬಸವೇಶ್ವರ ದೇವಸ್ಥಾನ (ಹೊಂಡ ಬಸವಣ್ಣ) ಕಿತ್ತೂರು (ಬಸಾಪುರ) |
| 17. | ಬಸವೇಶ್ವರ ದೇವಸ್ಥಾನ, ಚಿಕ್ಕನಂದಿಹಳ್ಳಿ |
| 18. | ನಿಚ್ಚನಕ್ಕಿ ಮಠ |
| 19. | ತುಂಬಗೀರಿ ಕೆರೆ |
| 20. | ಪರಸಾನತ್ತಿ ಕೆರೆ |
| 21. | ದೇಶಾನುರ |

| ಕ್ರಮ ಸಂಖ್ಯೆ | ಸ್ಥಳ |
|---|---|
| 22. | ವನ್ನೂರ |
| 23. | ದೇಗಾಂವ್ |
| 24. | ದೇಗಲೊಲ್ಲಿ |
| 25. | ಮೇಕಲಾ ಮರಡಿ |
| 26. | ಬೆಳವಾಡಿ |
| 27. | ಚೆನ್ನಮ್ಮ ವೃತ್ತ, ಸೋಮವಾರ ಪೇಟೆ, ಕಿತ್ತೂರು |
| 28. | ಅರಳಿಕಟ್ಟೆ ಕಿತ್ತೂರು |
| 29. | ಅರಭಾವಿ |
| 30. | ಹೆಬ್ಬಾಗ್ಲಿ ಭಾವಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ
ಹೆಸರಿನಲ್ಲಿ,

**ಜಿ.ಕೆ. ಬೋರೇಗೌಡ**

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ

**ಕಂದಾಯ ಇಲಾಖೆ (ಪುನರ್ವಸತಿ)**

**ಅಧಿಸೂಚನೆ**

**ಸಂಖ್ಯೆ: ಕಂಇ 158 ಆರ್‌ಇಹೆಚ್ 2011(ಭಾಗ–1), ದಿನಾಂಕ: 02.07.2012**

ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2011 (2012ರ ಕರ್ನಾಟಕ ಅಧಿನಿಯಮ, ಸಂಖ್ಯೆ:10)ರ 1ನೇ ಪ್ರಕರಣ (3)ನೇ ಉಪ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ರಾಜ್ಯ ಸರ್ಕಾರವು ದಿನಾಂಕ: 02.07.2012ನ್ನು ಸದರಿ ಅಧಿನಿಯಮದ ಉಪಬಂಧಗಳು ಜಾರಿಗೆ ಬರುವ ದಿನಾಂಕವೆಂದು ಈ ಮೂಲಕ ಗೊತ್ತುಪಡಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲಲಿತಾ ಹೆಚ್. ಹಂದಿಗೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಪುನರ್ವಸತಿ)

## 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 52

(2025ರ ಸೆಪ್ಟೆಂಬರ್ ತಿಂಗಳ 9ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025

(2025ರ ಸೆಪ್ಟೆಂಬರ್ ತಿಂಗಳ 8ನೇ ದಿನಾಂಕದಂದು ರಾಜ್ಯ ಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2011ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2011 (2012ರ ಕರ್ನಾಟಕ ಅಧಿನಿಯಮ ಸಂಖ್ಯೆ 10)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2011 (2012ರ ಕರ್ನಾಟಕ ಅಧಿನಿಯಮ ಸಂಖ್ಯೆ 10)ರ, 3ನೇ ಪ್ರಕರಣದ, (4)ನೇ ಉಪಪ್ರಕರಣದಲ್ಲಿರುವ, (ಎ) ಖಂಡದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(ಎ) ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾರೇ ಇತರ ಮಂತ್ರಿ - ಪದನಿಮಿತ್ತ ಅಧ್ಯಕ್ಷರು ".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.